

# ಬೆಳಗಾವಿ ವರದಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

Read,Share and Follow - www.belagavivaradi.com

Vol-04 | Issue: 252 | ₹ ಬೆಲೆ: 4 | Thursday, 30, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಹೈಕೋರ್ಟ್‌ಗೆ ಧನ್ಯವಾದ ತಿಳಿಸಿದ ಡಿಸಿಎಂ ಡಿಕೆಶಿ



ಬೆಂಗಳೂರು: ಸಿಬಿಐ ತನಿಖೆ ವಿಚಾರವಾಗಿ ಹೈಕೋರ್ಟ್ ನೀಡಿದ ಆದೇಶಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್‌ಕೋರ್ಟ್‌ಗೆ ಧನ್ಯವಾದ ತಿಳಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿರುವ ಡಿಕೆಶಿ ನಾನೇನೂ ತಪ್ಪು ಮಾಡಿಲ್ಲ, ಪಕ್ಷದ ಕೆಲಸ ಮಾಡಿದ್ದೇನೆ ಅಷ್ಟೇ. ಅದೇ ಕಾರಣಕ್ಕೆ ನನಗೆ ತೊಂದರೆ ನೀಡಿದ್ದಾರೆ. ಅದರ ಪರಿಣಾಮ ಏನಾಯಿತು ಎಂಬುದು ಎಲ್ಲರಿಗೂ ಗೊತ್ತಿದೆ. ಈ ಸಮಯದಲ್ಲಿ ಯಾರು ಏನು ಮಾತನಾಡಿದ್ದಾರೆ ಎಂಬುದನ್ನು ಗಮನಿಸಿದ್ದೇನೆ, ಎಲ್ಲರಿಗೂ ಒಳ್ಳೆಯದಾಗಲಿ. ಕಷ್ಟಕಾಲದಲ್ಲಿ ನನ್ನ ಜೊತೆ ನಿಂತ ಪ್ರತಿಯೊಬ್ಬರಿಗೂ ಧನ್ಯವಾದಗಳು' ಎಂದು ಬರೆದುಕೊಂಡಿದ್ದಾರೆ.

ಇನ್ನು ಮಾಧ್ಯಮಗಳ ಜೊತೆ ಮಾತನಾಡಿದ ಡಿಸಿಎಂ, ಪ್ರಕರಣದ ಬಗ್ಗೆ ಯಾರ್ಯಾರು ಏನೇನು ಮಾತನಾಡಿದ್ದಾರೆ ಎಲ್ಲವನ್ನೂ ಕೇಳಿದ್ದೇನೆ, ಎಲ್ಲದಕ್ಕೂ ಸೂಕ್ತ ಸಮಯದಲ್ಲಿ ಉತ್ತರ ನೀಡುತ್ತೇನೆ . ಈಗಾಗಲೇ ಸಾಕಷ್ಟು ಅನುಭವಿಸಿದ್ದೇನೆ, ಮುಂದೆನೂ ತೊಂದರೆ ಕೊಟುತ್ತೇವೆ ಎಂದರೆ ಅದನ್ನು ಭಗವಂತ ನೋಡಿಕೊಳ್ಳುತ್ತಾನೆ, ನನ್ನ ಪರವಾಗಿ ನಿಂತವರಿಗೆ ಧನವ್ಯವಾದ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

ಪ್ರಕರಣ ಸಂಬಂಧ ವಾದ ವಿವಾದ ಆಲಿಸಿದ ಕೋರ್ಟ್ ರಾಜ್ಯ ಸರ್ಕಾರ ಸಿಬಿಐ ತನಿಖೆ ಹಿಂಪಡೆದಿರುವ ಬಗ್ಗೆ ಮಾಹಿತಿ ಪಡೆದು ರಾಜ್ಯ ಸರ್ಕಾರದ ಆದೇಶವನ್ನು ಈವರೆಗೂ ಯಾರೂ ಪ್ರಶ್ನೆ ಮಾಡಿಲ್ಲ, ಅರ್ಜಿದಾರರು ಮನವಿಯನ್ನು ಹಿಂಪಡೆದಿದ್ದಾರೆ ಎಂದು ಸಿಬಿಐ ಪರ ವಕೀಲರ ವಾದವನ್ನು ಹೈಕೋರ್ಟ್ ತಳ್ಳಿ ಹಾಕಿದೆ. ಈ ಮೂಲಕ ಡಿಕೆಶಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ.

## 536ನೇ ಶ್ರೀ ಕನಕ ಜಯಂತ್ಯೋತ್ಸವ, ಭಾವೈಕ್ಯತಾ ಸಮಾವೇಶ

# ಕಾಗಿನೆಲೆ ಪೀಠ ಒಂದು ಜಾತಿಯ ನೆಲೆಯಾಗದಿರಲಿ: ಸಿಎಂ ಸಿದ್ದರಾಮಯ್ಯ



ಹಾವೇರಿ: ಕಾಗಿನೆಲೆ ಪೀಠ ಯಾವತ್ತೂ ಒಂದು ಜಾತಿಯ ನೆಲೆ ಆಗಬಾರದು. ಇದು ಎಲ್ಲಾ ಶೋಷಿತ ಸಮುದಾಯಗಳ ನೆಲೆ ಆಗಬೇಕು. ಹಿಂದಿನ ಜನ್ಮ-ಮುಂದಿನ ಜನ್ಮ ಎನ್ನುವುದೇ ಇಲ್ಲ. ಈ ಜನ್ಮದಲ್ಲಿ ನಾವು ಮಾಡುವ ಕೆಲಸಗಳೇ ಮುಖ್ಯ. ಈ ಕಾರಣಕ್ಕೆ ಬಸವಾದಿ ಶರಣರು ಮತ್ತು ಕನಕದಾಸರು ಕರ್ಮ ಸಿದ್ಧಾಂತ ಮತ್ತು ಜನ್ಮದ ಮೌಢ್ಯವನ್ನು ಸಾರಾಸಗಟಾಗಿ ತಿರಸ್ಕರಿಸಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರುಪೀಠದಲ್ಲಿ ಆಯೋಜಿಸಿದ್ದ 536ನೇ ಶ್ರೀ ಕನಕ ಜಯಂತ್ಯೋತ್ಸವ ಮತ್ತು ಭಾವೈಕ್ಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿ, ಕನಕ ಜಯಂತಿ ಪ್ರಯುಕ್ತ ಭಾವೈಕ್ಯತಾ ಸಮಾವೇಷ ಏರ್ಪಡಿಸಿರುವ ಶ್ರೀ ಮಠದ ಗುರುಗಳಿಗೆ ಹೃದಯಪೂರ್ವಕವಾಗಿ ವಂದಿಸುತ್ತೇನೆ. ಇದು ಅತ್ಯಂತ ಅರ್ಥಪೂರ್ಣ ಕಾರ್ಯಕ್ರಮ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಾವ್ಯಾರೂ ಅರ್ಜಿ ಹಾಕಿಕೊಂಡು ಜಾತಿ-ಧರ್ಮ ಆರಿಸಿಕೊಂಡು ಹುಟ್ಟಿಲ್ಲ. ಮೊದಲು ಮನುಷ್ಯರು ಮನುಷ್ಯರನ್ನು ಪ್ರೀತಿಸಬೇಕು. ಜಾತಿ-ಧರ್ಮ ರಹಿತ ಮನುಷ್ಯ ಪ್ರೇಮವನ್ನೇ ಕನಕದಾಸರು ಜಗತ್ತಿಗೆ ನೀಡಿದರು. ಕನಕಗುರು ಪೀಠ ಸ್ಥಾಪಿಸುವಾಗ ಇದನ್ನು ಕುರುಬರ ಮಠ ಆಗಬೇಕು ಎಂದು ಇಚ್ಛಿಸಲೇ ಇಲ್ಲ. ಎಲ್ಲಾ ಶೋಷಿತ ಧರ್ಮಗಳ ಮಠ ಆಗಬೇಕು ಎನ್ನುವುದು ನಮ್ಮ ಉದ್ದೇಶ ಆಗಿತ್ತು ಎಂದು ನೆನಪು ಮಾಡಿಕೊಂಡರು.

ಧರ್ಮ ಇರುವುದು ನಮಗಾಗಿ. ನಾವು ಧರ್ಮಕ್ಕಾಗಿ ಅಲ್ಲ. ಅದಕ್ಕೇ ಕನಕದಾಸರು ಕುಲ ಕುಲವೆಂದು ಬಡಿದಾಡದಿರಿ ಎಂದು ಹೇಳಿದ್ದು. ಬಸವಣ್ಣನವರು, "ಇವ ನಮ್ಮವ ಇವ ನಮ್ಮವ" ಎಂದಿದ್ದು. ಕುವೆಂಪು ಅವರು, "ಹುಟ್ಟುವಾಗ ಎಲ್ಲರೂ ವಿಶ್ವ ಮಾನವರು" ಎಂದರು, ಅಂಬೇಡ್ಕರ್ ಅವರು ಸಮ ಸಮಾಜದ ಬಗ್ಗೆ ಹೇಳಿದರು.

ಬಸವಾದಿ ಶರಣರು, ಕನಕದಾಸರು, ಅಂಬೇಡ್ಕರ್, ಕುವೆಂಪು, ಸೂಫಿಗಳ ಆಶಯಗಳೆಲ್ಲಾ ಒಂದೇ ಆಗಿತ್ತು. ಆದ್ದರಿಂದ ನಾವು ಇವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಮಲ್ಲೇಶಪ್ಪ ಹೊರಪೇಟೆ ಅವರ ಕನಕನ ಹೆಜ್ಜೆ ಮಕ್ಕಳ ಕಾದಂಬರಿಯನ್ನು ಮುಖ್ಯಮಂತ್ರಿಗಳು ಬಿಡುಗಡೆಗೊಳಿಸಿದರು. ಜಗದ್ಗುರು ಶ್ರೀ ನಿರಂಜನಾನಂದಪುರಿ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶ್ರೀ ರೇವಣಸಿದ್ದೇಶ್ವರ, ಶ್ರೀ ಬೀರಲಿಂಗೇಶ್ವರ, ಶ್ರೀ ಮೈಲಾರಲಿಂಗೇಶ್ವರ, ಶ್ರೀ ಮಹಾಸಿದ್ದೇಶ್ವರಿ ದೇವರುಗಳ ಕುಂಭಾಭಿಷೇಕ ನೆರವೇರಿಸಿದರು.

ಹುಬ್ಬಳ್ಳಿ, ಮೂರುಸಾವಿರ ಮಠದ ಶ್ರೀಮನ್ ಮಹಾರಾಜ ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು, ಹಜರತ್ ಬೀಜಾಪುರದ ಹಾಶಿಮ್ ಪೀರ್ ದರ್ಗಾದ ಸೈಯ್ಯದ್ ಮೊಹಮ್ಮದ್ ತನ್ವೀರ್ ಹಾಶ್ಮಿ, ಕರ್ನಾಟಕ ಧರ್ಮಪ್ರಾಂತ್ಯದ ಧರ್ಮಗುರು ಡಾ.ಫಾ.ಅಲ್ಫೋನ್ಸ್ ಫರ್ನಾಂಡೀಸ್ ಯೇಸ ಅವರು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ನಗರಾಭಿವೃದ್ಧಿ ಸಚಿವರಾದ ಭೈರತಿ ಸುರೇಶ್, ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ್, ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ವಿಧಾನಸಭೆಯ ಉಪಸಭಾಪತಿಗಳಾದ ರುದ್ರಪ್ಪ ಲಮಾಣಿ, ಮಾಜಿ ಸಚಿವರಾದ ಎಚ್.ಎಂ.ರೇವಣ್ಣ, ಹೊಸದುರ್ಗ ಶಾಸಕರಾದ ಬಿ.ಜಿ.ಗೋವಿಂದಪ್ಪ, ಹಿರೇಕೆರೂರು ಶಾಸಕ ಯು.ಬಿ.ಬಣಕಾರ್, ರಾಣೆಬೆನ್ನೂರು ಶಾಸಕರಾದ ಪ್ರಕಾಶ್ ಕೋಳಿವಾಡ, ಹಾನಗಲ್ ಶಾಸಕರಾದ ಶ್ರೀನಿವಾಸ್ ಮಾನೆ ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.

## ತಪ್ಪು ಮುಚ್ಚಿಕೊಳ್ಳಲು ವಿಜಯೇಂದ್ರನಿಗೆ ರಾಜ್ಯಾಧ್ಯಕ್ಷ ಪಟ್ಟ: ಆಯನೂರು ಮಂಜುನಾಥ್



ಶಿವಮೊಗ್ಗ: ತಪ್ಪು ಮುಚ್ಚಿಕೊಳ್ಳಲು ವಿಜಯೇಂದ್ರನಿಗೆ ರಾಜ್ಯಾಧ್ಯಕ್ಷ ಪಟ್ಟ ನೀಡಲಾಗಿದೆ ಎಂದು ಆಯನೂರು ಮಂಜುನಾಥ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಬಿಜೆಪಿ ನಾಯಕರು ರಾಜ್ಯದಲ್ಲಿ ಬಿಜೆಪಿಯನ್ನು ಕಟ್ಟಿ ಬೆಳೆಸಿದ ಬಿ.ಎಸ್. ಯಡಿಯೂರಪ್ಪರನ್ನು ಕಡೆಗಣಿಸಿದ್ದರು. ಆ ತಪ್ಪು ಮುಚ್ಚಿಕೊಳ್ಳಲು ಈಗ ಅವರ ಪುತ್ರನಿಗೆ ರಾಜ್ಯಾಧ್ಯಕ್ಷ ಪಟ್ಟ ನೀಡಿದ್ದಾರೆ. ಆದರೆ, ನಿಜವಾಗಿಯೂ ಇದು ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಮೇಲೆ ಜವಾಬ್ದಾರಿ ಹೊರಿಸುವಂತಹುದ್ದಾಗಿದೆ ಎಂದು ಆಯನೂರು ಮಂಜುನಾಥ್ ಹೇಳಿದರು.

ವಿಜಯೇಂದ್ರ ಅವರಿಗೆ ರಾಜ್ಯಾಧ್ಯಕ್ಷ ಸ್ಥಾನ ಸಿಕ್ಕಿದೆ. ಸ್ವಾಗತ. ಆದರೆ, ಅದನ್ನು ಸಮರ್ಥವಾಗಿ ಬಳಸಿಕೊಳ್ಳಲಿ. ಕೇವಲ ಆಡಳಿತ ಪಕ್ಷ ಟೀಕಿಸುವ ಮನೋಭಾವ ಬಿಟ್ಟು ಜನರ ನೋವುಗಳಿಗೆ ಸ್ಪಂದಿಸುವ ಕೆಲಸ ಮಾಡಲಿ ಎಂದರು.

ಪಂಚ ರಾಜ್ಯಗಳ ಚುನಾವಣೆ ಮುಗಿದ ನಂತರ ರಾಜ್ಯದಲ್ಲಿ ವಿಧಾನ ಪರಿಷತ್ ಚುನಾವಣೆ ನಡೆಯಲಿದೆ. ನೈರುತ್ಯ ಪದವೀಧರ ಕ್ಷೇತ್ರದಿಂದ ನಾನು ಸ್ಪರ್ಧಿಸುವ ಸಾಧ್ಯತೆ ಹೆಚ್ಚಿದ್ದು, ಲೋಕಸಭೆ ಮತ್ತು ವಿಧಾನಸಭೆ ಅನುಭವ ಕೂಡ ನನಗಿದೆ. ಸಾವಿರಾರು ಸರ್ಕಾರಿ ನೌಕರರ ಹಾಗೂ ಪದವೀಧರರ ಒಡನಾಟ ಹೊಂದಿರುವ ನನಗೆ ಟಿಕೆಟ್ ಸಿಕ್ಕರೆ ಗೆಲ್ಲುವ ವಿಶ್ವಾಸವಿದೆ ಎಂದರು.

## ನ. 30 ಮತ್ತು ಡಿ.1 ರಂದು ಜಿಲ್ಲೆಗೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಭೇಟಿ



ಧಾರವಾಡ: ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಧಾರವಾಡ ಜಿಲ್ಲೆಗೆ ನವೆಂಬರ್ 30 ಹಾಗೂ ಡಿಸೆಂಬರ್ 1 ರಂದು ಭೇಟಿ ನೀಡಿ, ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳನ್ನು ಆಲಿಸಿ, ಸ್ವೀಕರಿಸಲಿದ್ದಾರೆ.

ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್. ಪಾಟೀಲ ಅವರು ಡಿಸೆಂಬರ್ 1 ರಂದು ಬೆಳಿಗ್ಗೆ 10:30 ರಿಂದ ಮಧ್ಯಾಹ್ನ 1:30 ಗಂಟೆಯವರೆಗೆ ಧಾರವಾಡ ಜಿಲ್ಲಾ ಪಂಚಾಯತ ಸಭಾಗಂಣದಲ್ಲಿ ಮೊದಲಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ಜರುಗಿಸಿ, ಅಧಿಕಾರಿಗಳ ಕಾರ್ಯವೈಖರಿ ಪರಿಶೀಲಿಸಲಿದ್ದಾರೆ. ಮತ್ತು ಸಭೆಯ ನಂತರ ಸಾರ್ವಜನಿಕರ ಅಹವಾಲು, ಕುಂದುಕೊರತೆಗಳನ್ನು ಆಲಿಸಿ, ಅರ್ಜಿಗಳನ್ನು ಸ್ವೀಕರಿಸುವರು ಎಂದು ಲೋಕಾಯುಕ್ತ ಧಾರವಾಡ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 3,607 ಕೋಟಿ ರೂ. ಮೌಲ್ಯದ 62 ಹೂಡಿಕೆ ಪ್ರಸ್ತಾವನೆಗಳಿಗೆ ರಾಜ್ಯ ಸರ್ಕಾರ ಅನುಮೋದನೆ




ಬೆಂಗಳೂರು: ರಾಜ್ಯ ಮಟ್ಟದ ಏಕ ಗವಾಕ್ಷಿ ಅನುಮೋದನೆ ಸಮಿತಿಯು(ಎಸ್‌ಎಲ್‌ಎಸ್‌ಡಬ್ಲ್ಯುಸಿಸಿ) 3,607.19 ಕೋಟಿ ರೂಪಾಯಿ ಮೌಲ್ಯದ 62 ಕೈಗಾರಿಕಾ ಹೂಡಿಕೆ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿದೆ. ಇದರಿಂದ ರಾಜ್ಯದಲ್ಲಿ 10,755 ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಅಧಿಕೃತ ಪ್ರಕಟಣೆ ಬುಧವಾರ ತಿಳಿಸಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ನೇತೃತ್ವದ ಖಐಖಫಅಅ ಸಮಿತಿಯು 50 ಕೋಟಿ ರೂ.ಗಿಂತ ಹೆಚ್ಚಿನ ಹೂಡಿಕೆಯನ್ನು ಒಳಗೊಂಡ ಎಂಟು ಯೋಜನೆಗಳಿಗೆ ಅನುಮೋದನೆ ನೀಡಿದ್ದಾರೆ. ಇವು 6,360 ಉದ್ಯೋಗಗಳನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿವೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಟೆಕ್ಸ್‌ಕಾನ್ ಸ್ಟೀಲ್ಸ್, ಹುಂಡ್ರಿ ಶುಗರ್ಸ್ ಮತ್ತು ಎಥೆನಾಲ್ ಪ್ರೈವೇಟ್ ಲಿಮಿಟೆಡ್, ಬ್ರೆನ್ ಲೈಫ್ ಸೈನ್ಸಸ್, ಆಲ್ಕೈನ್ ಎಥೆನಾಲ್, ವಿರೂಪಾಕ್ಷ ಲ್ಯಾಬೋರೇಟರೀಸ್ ಮತ್ತು ಕ್ವಾಲ್‌ಕಾಮ್ ಇಂಡಿಯಾ ಅನುಮೋದನೆ ಪಡೆದ ಕೆಲವು ಪ್ರಮುಖ ಹೂಡಿಕೆದಾರರಾಗಿದ್ದಾರೆ.

577.35 ಕೋಟಿ ಹೆಚ್ಚುವರಿ ಹೂಡಿಕೆಯ ಮೂರು ಯೋಜನೆಗಳಿಗೂ SLSWCC ಸಮಿತಿ ಒಪ್ಪಿಗೆ ನೀಡಿದೆ.

## ವಿಮಾನ ಪತನ 8 ಸೇನಾ ಸಿಬ್ಬಂದಿ ಸಾವು



ವಾಷಿಂಗ್ಟನ್: ಅಮೆರಿಕದ Osprey ಮಿಲಿಟರಿ ವಿಮಾನವೊಂದು ಜಪಾನ್ನ ಯಕುಶಿಮಾ ದ್ವೀಪದ ಬಳಿ ಪತನಗೊಂಡಿದ್ದು, ಅದರಲ್ಲಿದ್ದ 8 ಸೇನಾ ಸಿಬ್ಬಂದಿ ಸಾವಿಗೀಡಾಗಿದ್ದಾರೆ ಎಂದು ವರದಿಯಾಗಿದೆ.

ಸ್ಥಳೀಯ ಕಾಲಮಾನ ಮಧ್ಯಾಹ್ನ 02:47 ಗಂಟೆಗೆ ವಿಮಾನ ಯಕುಶಿಮಾ ದ್ವೀಪದಲ್ಲಿ ಪತನಗೊಂಡಿದೆ. ವಿಮಾನ ಕೆಳಗೆ ಬರುವಾಗ ಎಡ ಭಾಗದ ಇಂಜಿನ್ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬಳಿಕ ವಿಮಾನವು ಪಶ್ಚಿಮ ಜಪಾನ್ನ ಸಮುದ್ರಕ್ಕೆ ಅಪ್ಪಳಿಸಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದು ಬಂದಿಲ್ಲ ಎಂದು ಜಪಾನ್ನ ಕರಾವಳಿ ಕಾವಲು ಪಡೆ ಹೇಳಿದೆ. ವಿಮಾನ ಪತನಗೊಂಡ ಪ್ರದೇಶದಲ್ಲಿ ಅಮೆರಿಕದ ಅಧಿಕಾರಿಗಳು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ವಿಮಾನ ಪತನಕ್ಕೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಳೆದ ಆಗಸ್ಟ್‌ನಲ್ಲಿ ಉತ್ತರ ಆಸ್ಟ್ರೇಲಿಯಾದಲ್ಲಿ Osprey ವಿಮಾನ ಪತನಗೊಂಡಿತ್ತು. ಘಟನೆಯಲ್ಲಿ 32 ಮಂದಿ ಸಾವಿಗೀಡಾಗಿದ್ದರು.

# ಆಕರ್ಷಣೆಯ ಕೇಂದ್ರವಾಗಿರುವ ಚಂದ್ರಯಾನ-3 ಉಪಗ್ರಹ ಮತ್ತು ರೋವರ್

ಉಪಮುಖ್ಯಮಂತ್ರಿಗಳು ಹಾಗೂ ಸಚಿವರುಗಳಿಂದ ಚಾಲನೆ

ಬೆಂಗಳೂರು, ನ, 29; ಬೆಂಗಳೂರಿನಲ್ಲಿ ನಡೆಯುತ್ತಿರುವ ಬೆಂಗಳೂರು ಟೆಕ್ ಸಮ್ಮಿಟ್ ನಲ್ಲಿ ಸಂಚಾರಿ ವ್ಯವಸ್ಥೆ ಮೂಲಕ ಶಾಲೆಯ ಬಾಗಿಲಿಗೆ ತಾರಾಲಯ ಕೊಂಡೊಯ್ಯುತ್ತಿರುವ ತಾರೆ ಜಮೀನ್ ಪರ್ ಸಂಸ್ಥೆಯು ಆಯೋಜಿಸಿರುವ ಚಂದ್ರಯಾನ- 3 ಪೆವಿಲಿಯನ್ ಎಲ್ಲರ ಆಕರ್ಷಣೆಯ ಕೇಂದ್ರ ಬಿಂದುವಾಗಿದೆ.

ನಗರದ ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಟೆಕ್ ಸಮ್ಮಿಟ್ ನಲ್ಲಿ ಇದು ತಂತ್ರಜ್ಞರ ಹಾಗೂ ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಇದಕ್ಕಾಗಿ ಜಿಯೋಡೆಸಿಕ್ ಡೋಮ್ ಪ್ಲಾನಿಟೋರಿಯಮ್ ಅಳವಡಿಸಲಾಗಿದ್ದು ವಿಆರ್ ತಂತ್ರಜ್ಞಾನದ ಮೂಲಕ ಚಂದ್ರಯಾನದ ಅಭೂತಪೂರ್ವ ಅನುಭೂತಿಯನ್ನು ಇದು ನೀಡುತ್ತಿದೆ.

ಉಪಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ, ಐಟಿ,ಬಿಟಿ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವರಾದ ಪ್ರಿಯಾಂಕ ಖರ್ಗೆ ಈ ಪೆವಿಲಿಯನ್ ಗೆ ಚಾಲನೆ ನೀಡಿ ಸಂತಸ ವ್ಯಕ್ತಪಡಿಸಿದರು.



ಚಂದ್ರಯಾನ-3 ಉಪಗ್ರಹ ಮತ್ತು ರೋವರ್ ಪ್ರಮುಖ ಆಕರ್ಷಣೆಯ ಸಂಗತಿಯಾಗಿದೆ.

ತಾರೆ ಜಮೀನ್ ಪರ್ ಸಂಸ್ಥೆಯ ಸಂಸ್ಥಾಪಕ ದಿನೇಶ್ ಬಾದಗಂಡಿ ನೇತೃತ್ವದಲ್ಲಿ ಚಂದ್ರಯಾನ- 3 ಮಾದರಿ ಅಳವಡಿಸಿದ್ದು, ಇಸ್ರೋದ ಪ್ರಮುಖ ಬಾಹ್ಯಾಕಾಶ ಕಾರ್ಯಕ್ರಮದ ಬಗ್ಗೆ ಅತೀವ ಆಸಕ್ತಿ ವ್ಯಕ್ತವಾಗಿದೆ. ದಿನೇಶ್ ಬಾದಗಂಡಿ ಮೂಲತಃ ಗ್ರಾಮೀಣ ಪ್ರದೇಶದವರಾಗಿದ್ದು, ಅವರು ಪ್ರಿಸ್ಟೀಜಿಯಸ್ ಎಲೆವೇಟ್-100 ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಾಜ್ಯ ಸರ್ಕಾರದ ಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವವರಲ್ಲಿ ಸಕಾರಾತ್ಮಕ ಬದಲಾವಣೆ ತರುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಶಾಲಾ ವಿದ್ಯಾರ್ಥಿಗಳಿಗಾಗಿ ತಾರೆ ಜಮೀನ್ ಪರ್ ಸಂಚಾರಿ ಪ್ರಯೋಗಾಲಯದ ಪರಿಕಲ್ಪನೆಯನ್ನು ರೂಪಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ದಿನೇಶ್ ಬಾದಗಂಡಿ, ರಾಜ್ಯದ ಮೂಲೆ ಮೂಲೆಗಳಲ್ಲಿ ತಾರಾಲಯ ಸಂಚರಿಸಿ 21 ಲಕ್ಷ ಗ್ರಾಮೀಣ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಿದೆ. ಸಾಂಪ್ರಾಯಿಕ ವಿಧಾನಗಳನ್ನು ಮೀರಿ ಈ ಸಂಸ್ಥೆಯು "ಮೇಕ್ ಇನ್ ಕರ್ನಾಟಕ" ನೀತಿಗೆ ಸಾಕ್ಷಿಯಾಗಿದ್ದು, ಇದಕ್ಕೆ ಅನುಗುಣವಾಗಿ ಅರೆ ಶಾಶ್ವತ ಜಿಯೋಡೆಸಿಕ್ ಗುಮ್ಮಟವನ್ನು ಅನಾವರಣಗೊಳಿಸಿದೆ. ಇದರಿಂದ ತಾರಾಲಯದ ವೆಚ್ಚ ಶೇ 50 ರಷ್ಟು ಕಡಿಮೆ ಮಾಡಲು ಸಹಕಾರಿಯಾಗಿದೆ. ಸಾಂಪ್ರದಾಯಿಕ ತಾರಾಲಯಗಳು ಸಂವಾತ್ಮಕ ಕಲಿಕೆಗೆ ಪೂರಕವಾಗಿಲ್ಲ. ಆದರೆ ಇದು ಸಂವಾದಾತ್ಮಕ ಕಲಿಕೆಗೆ ಸಹಕಾರಿಯಾಗಿದೆ ಎಂದು ಹೇಳಿದರು.

ಜಾಯ್ ಸ್ಟಿಕ್ ಮತ್ತು ಕೀಬೋರ್ಡ್ ಬಳಕೆಯ ಮೂಲಕ ಬಳಕೆದಾರರು ಆಕಾಶಕಾಯಗಳನ್ನು ನಿರ್ವಹಿಸಬಹುದು ಮತ್ತು ಅನ್ವೇಷಿಸಬಹುದು. ಚಂದ್ರಯಾನವನ್ನು ಮುನ್ನಡೆಸುವುದು, ಬಾಹ್ಯಾಕಾಶದಲ್ಲಿ ನ್ಯಾವಿಗೇಟ್ ಮಾಡುವುದು ಅಥವಾ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಡಾಕಿಂಗ್ ಮಾಡುವುದು, ಡಿಜಿಟಲ್ ತಾರಾಲಯವು ಸಾಟಿಯಿಲ್ಲದ ಆಳವಾದ ಪ್ರಯಾಣದ ಅನುಭವವನ್ನು ನೀಡುತ್ತದೆ. ಇದು ತಾರೆ ಜಮೀನ್ ಪರ್ ನ ಸಾಧನೆ ಮಾತ್ರವಲ್ಲ, ನಾವೀನ್ಯತೆ ಮತ್ತು ಶಿಕ್ಷಣದ ಶಕ್ತಿಯನ್ನು ಪ್ರದರ್ಶಿಸುವ ರಾಜ್ಯಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದ್ದಾರೆ.

## ಕೆಲಸದ ಆಮಿಷವೊಡ್ಡಿ 20 ಕೋಟಿ ವಂಚನೆ; ಆರೋಪಿ ಅರೆಸ್ಟ್



ಬೆಂಗಳೂರು: ಸಿಲಿಕಾನ್ ಸಿಟಿ, ರಾಜ್ಯ ರಾಜಧಾನಿ ಬೆಂಗಳೂರಿಗೆ ಕೆಲಸ ಹುಡುಕಿ ಬರುವ ಯುವಕ-ಯುವತಿಯರನ್ನೇ ಟಾರ್ಗೆಟ್ ಮಾಡಿ ಕೆಲಸದ ಆಮಿಷವೊಡ್ಡಿ ಕೋಟ್ಯಂತರ ರೂಪಾಯಿ ಹಣ ದೋಚಿದ್ದ ಖತರ್ನಾಕ್ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.


ಬೆಂಗಳೂರಿನ ವೈಟ್ ಫೀಲ್ಡ್ ಪೊಲೀಸರು ಆರೋಪಿಯನ್ನು ಬಂಧಿಸಿದ್ದು, ಬಂಧಿತನನ್ನು ಪವನ್ ಕುಮಾರ್ ಎಂದು ಗುರುತಿಸಲಾಗಿದೆ. ಸಾವಿರಕ್ಕೂ ಹೆಚ್ಚು ಯುವಕ-ಯುವತಿಯರಿಗೆ ಕೆಲಸ ಕೊಡಿಸುವುದಾಗಿ ಹೇಳಿ ಅವರಿಂದಲೇ ಹಣ ಪಡೆದು ಎಸ್ಕೇಪ್ ಆಗಿದ್ದ.

ಪವನ್ ಕುಮಾರ್ ಹಾಗೂ ಗ್ಯಾಂಗ್ SIMAKH TECHNOLOGY ಮತ್ತು MONTY CORPS ಎಂಬ ಕಂಪನಿ ತೆರೆದಿದ್ದರು. ನಮ್ಮದೇ ಕಂಪನಿಯಲ್ಲಿ ಕೆಲಸ ಕೊಡುತ್ತೇವೆ ಎಂದು ನಿರುದ್ಯೋಗ ಯುವಕ-ಯುವತಿಯರನ್ನು ನಂಬಿಸಿ ಹಣ ಪಡೆಯುತ್ತಿದ್ದರು. ಆಂಧ್ರ ಮೂಲದ ವಿದ್ಯಾವಂತ ಯುವಕರನ್ನೇ ಹೆಚ್ಚಾಗಿ ಟಾರ್ಗೆಟ್ ಮಾಡುತ್ತಿದ್ದರು. ಇದೇ ರೀತಿ ಕೆಲಸದ ಆಮಿಷವೊಡ್ಡಿ ಬರೋಬ್ಬರಿ 20 ಕೋಟಿ ಹಣವನ್ನು ಪವನ್ ಹಾಗೂ ಗ್ಯಾಂಗ್ ವಂಚಿಸಿದೆ.

ಆರಂಭದಲ್ಲಿ ವರ್ಷಕ್ಕೆ 5 ಲಕ್ಷ ಪ್ಯಾಕೇಜ್ ಎಂದು ಹೇಳಿ ಹಳೆ ಲ್ಯಾಪ್ ಟಾಪ್ ನ್ನು ಕೆಲಸಕ್ಕೆ ಸೇರಿಕೊಂಡವರಿಗೆ ಕೊಡುತ್ತಿದ್ದರು. ಆರಂಭದಲ್ಲಿ ಹಣ ಕಟ್ಟಬೇಕೆಂದು ಲಕ್ಷ ರೂಪಾಯಿ ಕಟ್ಟಿಸಿಕೊಳ್ಳುತ್ತಿದ್ದರು. ಬಳಿಕ ಕೆಲ ತಿಂಗಳು ಸಂಬಳವನ್ನು ಕೊಡುತ್ತಿದ್ದ ಗ್ಯಾಂಗ್ ಬಳಿಕ ಕಂಪನಿಯನ್ನೇ ಮುಚ್ಚಿ ಎಸ್ಕೇಪ್ ಆಗುತ್ತಿತ್ತು. ಹೀಗೆ ಬೆಂಗಳೂರಿನ ಹಲವೆಡೆಗಳಲ್ಲಿ ಕಂಪನಿ ತೆರೆದು ಮೋಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಹಣ ಕಳೆದುಕೊಂಡ ಯುವಕ-ಯುವತಿಯರು ವೈಟ್ ಫೀಲ್ಡ್ ಠಾಣೆಯಲ್ಲಿ ದೂರು ನೀಡಿದ್ದರು. ಪ್ರಕರಣ ದಾಖಲಾಗುತ್ತಿದ್ದಂತೆ ದೆಹಲಿಗೆ ತೆರಳಿ ತಲೆಮರೆಸಿಕೊಂಡಿದ್ದ ಆರೋಪಿ. ಆರೋಪಿ ಬಂಧನಕ್ಕೆ ಪ್ಲಾನ್ ಮಾಡಿದ ಪೊಲೀಸರು ಸಂತ್ರಸ್ತರಿಂದ ಕರೆ ಮಾಡಿಸಿ ನಿಮ್ಮ ಕಂಪನಿಯಲ್ಲಿ ಕೆಲಸಕ್ಕೆ ಸೇರಲು ಬಂದಿದ್ದು, ಲಕ್ಷ ಲಕ್ಷ ಹಣದ ಜೊತೆ ಸಿದ್ಧರಿರುವುದಾಗಿ ಹೇಳಿ ಬೆಂಗಳೂರಿಗೆ ಆರೋಪಿಯನ್ನು ಕರೆಸಿಕೊಂಡಿದ್ದಾರೆ. ಹಣದ ಆಸೆಗೆ ದೆಹಲಿಯಿಂದ ಬೆಂಗಳೂರಿಗೆ ಬಂದ ಪವನ್ ಕುಮಾರ್ ಈಗ ಪೊಲೀಸರ ಅತಿಥಿಯಾಗಿದ್ದಾನೆ.

## ವೈದ್ಯರ ನಿರ್ಲಕ್ಷ್ಯ: ಮಗು ಸಾವು; ಪೋಷಕರ ಆಕ್ರೋಶ



ಬೆಂಗಳೂರು: ನಿಮ್ಹಾನ್ಸ್ ಆಸ್ಪತ್ರೆ ವೈದ್ಯರ ನಿರ್ಲಕ್ಷ್ಯದಿಂದಲೇ ಮಗು ಸಾವನ್ನಪ್ಪಿದೆ ಎಂದು ಪೋಷಕರು ಆರೋಪಿಸಿದ್ದಾರೆ. ಹಾಸನದಿಂದ ಝೀರೋ ಟ್ರಾಫಿಕ್ನಲ್ಲಿ ಆಂಬುಲೆನ್ಸ್ನಲ್ಲಿ ಬಂದ್ರೂ ಚಿಕಿತ್ಸೆ ನೀಡಲು ಬೆಡ್ ಇಲ್ಲ ಎಂದು ನಿರ್ಲಕ್ಷ್ಯ ತೋರಿದ್ರು. ಇದರಿಂದಲೇ ಮಗು ಜೀವ ಕಳೆದುಕೊಂಡಿದೆ ಎಂದು ನಿಮ್ಹಾನ್ಸ್ ಆಡಳಿತ ಮಂಡಳಿ ವಿರುದ್ಧ ಪೋಷಕರು ಆಕ್ರೋಶ ಹೊರಹಾಕಿದ್ದಾರೆ.

ಒಂದು ವರ್ಷದ ಮಗುವೊಂದು ತಾಯಿ ಕೈನಿಂದ ಜಾರಿ ಕೆಳಗೆ ಬಿದ್ದಿತ್ತು. 10 ಅಡಿ ಮೇಲಿನಿಂದ ಕೈನಿಂದ ಜಾರಿ ಕೆಳಗೆ ಬಿದ್ದಿದ್ದ ಮಗು ಸ್ಥಿತಿ ಗಂಭೀರ ಆಗಿತ್ತು. ಹೀಗಾಗಿ ಹಾಸನ ಸರ್ಕಾರಿ ಆಸ್ಪತ್ರೆಗೆ ಮಗುವನ್ನು ದಾಖಲಿಸಲಾಗಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ನಿಮ್ಹಾನ್ಸ್ಗೆ ಹೋಗುವಂತೆ ಸೂಚನೆ ನೀಡಲಾಗಿತ್ತು. ಹೀಗಾಗಿ ಝೀರೋ ಟ್ರಾಫಿಕ್ನಲ್ಲಿ ಮಗುವನ್ನು ಆಂಬುಲೆನ್ಸ್ನಲ್ಲಿ ಕರೆದುಕೊಂಡು ಬರಲಾಗಿತ್ತು.

ಇನ್ನು, ಮಗುವಿಗಾಗಿ ಬೆಡ್ ಕಾಯ್ದಿರಿಸಲು ಸರ್ಕಾರಿ ವೈದ್ಯರು ನಿಮ್ಹಾನ್ಸ್ಗೆ ತಿಳಿಸಿದ್ದರು. ಹೀಗಿದ್ದರೂ ಮಗುವಿಗೆ ಬೆಡ್ ಇಲ್ಲ ಅಂತ ನಿಮ್ಹಾನ್ಸ್ ಆಡಳಿತ ಮಂಡಳಿ ಹೇಳಿದೆ. ಕೇವಲ 1 ಗಂಟೆ 40 ನಿಮಿಷದಲ್ಲಿ ಹಾಸನದಿಂದ ನಿಮ್ಹಾನ್ಸ್ಗೆ ಬಂದಿತ್ತು ಆಂಬುಲೆನ್ಸ್. ಅರ್ಧ ಗಂಟೆ ಆಂಬುಲೆನ್ಸ್ನಲ್ಲೇ ಕಾದರೂ ಮಗುವಿಗೆ ಚಿಕಿತ್ಸೆ ಸಿಗಲಿಲ್ಲ. ಪ್ರಾಥಮಿಕ ಚಿಕಿತ್ಸೆಯೂ ನೀಡದೆ ನಿಮ್ಹಾನ್ಸ್ನಲ್ಲಿ ಬೇಜವಾಬ್ದಾರಿ ತೋರಲಾಗಿದೆ ಎಂದು ಪೋಷಕರ ಆರೋಪ ಮಾಡಿದ್ದಾರೆ.

## ದೆಹಲಿ ವಿಳಾಸವುಳ್ಳ ಹೊಸ ಮತದಾರರ ಗುರುತಿನ ಚೀಟಿ ಪಡೆದ ರಾಷ್ಟ್ರಪತಿ ದ್ರೌಪದಿ ಮುರ್ಮು



ನವದೆಹಲಿ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ರಾಷ್ಟ್ರಭತಿ ಭವನದಲ್ಲಿ ದೆಹಲಿ ಮುಖ್ಯ ಚುನಾವಣಾಧಿಕಾರಿ ಪಿ ಕೃಷ್ಣಮೂರ್ತಿ ಅವರಿಂದ ಬದಲಾದ ವಿಳಾಸದೊಂದಿಗೆ ಹೊಸ ಮತದಾರರ ಗುರುತಿನ ಚೀಟಿಯನ್ನು ಸ್ವೀಕರಿಸಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ಮುರ್ಮು ಅವರು ಇದೀಗ ನವದೆಹಲಿಯ ಜಿಲ್ಲೆಯಿಂದ ಮುಂಬರುವ ಚುನಾವಣೆಯಲ್ಲಿ ಮತ ಚಲಾಯಿಸಲು ಅರ್ಹರಾಗಿರುತ್ತಾರೆ ಎಂದು ಸಿಇಒ ಕಚೇರಿಯ ಹೇಳಿಕೆ ತಿಳಿಸಿದೆ.

ಕೃಷ್ಣಮೂರ್ತಿ ಅವರು ತಮ್ಮ ಭೇಟಿಯ ಸಂದರ್ಭದಲ್ಲಿ ದೆಹಲಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ರಾಷ್ಟ್ರಪತಿಗಳಿಗೆ ತಿಳಿಸಿದ್ದರು.

ಮುರ್ಮು ಅವರ ಹಳೆಯ ಮತದಾರರ ಚೀಟಿಯಲ್ಲಿ ಅವರ ಒಡಿಶಾದ ಮಯೂರ್‌ಭಂಜ್ ವಿಳಾಸ ಇತ್ತು. ಇದೀಗ ಅದು ದೆಹಲಿಯ ವಿಳಾಸಕ್ಕೆ ಬದಲಾಗಿದೆ.

ದೆಹಲಿ ಸಿಇಒ ಈ ತಿಂಗಳ ಆರಂಭದಲ್ಲಿ ರಾಷ್ಟ್ರಪತಿ ಭವನಕ್ಕೆ ಭೇಟಿ ನೀಡಿದ್ದು, ಅವರ ಮತದಾರರ ಗುರುತಿನ ಚೀಟಿಯಲ್ಲಿನ ವಿಳಾಸ ಬದಲಾವಣೆಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರಸ್ತೆಯಲ್ಲಿ ಸಂಚರಿಸುತ್ತಿದ್ದ ಕಾರಿಗೆ ವಿಮಾನ ಡಿಕ್ಕಿ



ದಟ್ಟನೆಯ ಸಂಚಾರದ ರಸ್ತೆಯಲ್ಲಿ ಸಂಚರಿಸುತ್ತಿದ್ದ ಕಾರಿಗೆ ಲಘು ವಿಮಾನವೊಂದು ಡಿಕ್ಕಿ ಹೊಡೆದಿರುವ ಘಟನೆ ಅಮೆರಿಕದಲ್ಲಿ ನಡೆದಿದೆ.

ಯುನೈಟೆಡ್ ಸ್ಟೇಟ್ಸ್‌ನ ಮಿನ್ನಿಯಾಪೋಲಿಸ್‌ನಲ್ಲಿ ನಡೆದ ಘಟನೆಯ ವಿಡಿಯೋ ಸದ್ಯ ಸೋಸಿಯಲ್ ಮಿಡಿಯಾದಲ್ಲಿ ವೈರಲ್ ಆಗಿದೆ.

ಇದೇ ಮಂಗಳವಾರ ಅಂದರೆ 28 ನವೆಂಬರ್ 2023 ರಂದು ಯುಎಸ್ ನಗರದ ಮಿನ್ನಿಯಾಪೋಲಿಸ್‌ನ ಹೆದ್ದಾರಿಯಲ್ಲಿ ವಿಮಾನ ಪತನವಾದ ಪರಿಣಾಮ ಅದೇ ರಸ್ತೆಯಲ್ಲಿ ಬರುತ್ತಿದ್ದ ಕಾರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ಪರಿಣಾಮವಾಗಿ ಕಾರು ಚಾಲಕ ಹಾಗೂ ಪೈಲಟ್ ಗಾಯಗೊಂಡಿದ್ದು, ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲಾಗಿದೆ. ಇನ್ನು ಈ ಘಟನೆ ಕುರಿತು ಅಮೆರಿಕದ ಫೆಡರಲ್ ಏವಿಯೇಷನ್ ಅಥಾರಿಟಿ ತನಿಖೆ ಆರಂಭಿಸಿದ್ದು, ಅಪಘಾತ ಸಂಭವಿಸಿದ ರಸ್ತೆಯನ್ನು ಕೆಲವು ಗಂಟೆಗಳ ಕಾಲ ವಾಹನ ಸಂಚಾರ ಬಂದ್ ಮಾಡಲಾಗಿತ್ತು.

# ಇಂದು ಕನಕ ಜಯಂತಿ ಆಚರಣೆ

ಮಂಗಳೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಕನಕ ಜಯಂತಿ ಆಚರಣೆಯನ್ನು ನವಂಬರ್ 30ರಂದು ಬೆಳಿಗ್ಗೆ 10.30 ಗಂಟೆಗೆ ತುಳುಭವನ, ಉರ್ವಸ್ಟೋರ್ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮ ಉದ್ಘಾಟಿಸುವರು.

ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಫರೀದ್ ಘನ ಉಪಸ್ಥಿತಿಯಲ್ಲಿ ಶಾಸಕರಾದ ಡಿ. ವೇದವ್ಯಾಸ ಕಾಮತ್ ಅಧ್ಯಕ್ಷತೆ ವಹಿಸಲಿರುವರು. ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮುಂಡಾಜೆಯ ಅಧ್ಯಾಪಕರಾದ ಅರವಿಂದ ಚೊಕ್ಕಾಡಿ  ಕನಕ ಜಯಂತಿ ಸಂದೇಶವನ್ನು ನೀಡಲಿದ್ದಾರೆ.

# ಡಿ.17ರಂದು ಸ್ವಚ್ಛತಾ ಅಭಿಯಾನ

ಮಂಗಳೂರು: ನಗರದ ಬೆಂಗ್ರೆ ಸ್ಥಳವು ಫಲ್ಗುಣಿ ನದಿ ಮತ್ತು ಸಮುದ್ರದ ಮಧ್ಯೆ ಇರುವ ಪ್ರದೇಶವಾಗಿದೆ. ಇದರಲ್ಲಿ ತೋಟ ಬೆಂಗ್ರೆ, ಕಸಬ ಬೆಂಗ್ರೆ ಮತ್ತು ತಣ್ಣೀರು ಬಾವಿ ಇಲ್ಲಿ ಸಾವಿರಾರು ಸಂಖ್ಯೆಯಲ್ಲಿ ವಾಸವಾಗಿರುವ ಜನವಸತಿ ಪ್ರದೇಶವಾಗಿದೆ. ಇಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಹೇಳಿದರು.

ಅವರು ಜಿಲ್ಲಾಧಿಕಾರ ಸಭಾಂಗಣದಲ್ಲಿ ನಡೆದ ಆಜಾದಿ ಕಾ ಅಮೃತ್ ಮಹೋತ್ಸವದ ಅಂಗವಾಗಿ "ಸ್ವಚ್ಛ ಭಾರತ್ ಮಿಷನ್" ಅಡಿಯಲ್ಲಿ ಆಯೋಜಿಸಿದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನದಿ ಮತ್ತು ಸಮುದ್ರ ಸಂಧಿಸುವ ಡೆಲ್ಟಾ ಪಾಯಿಂಟ್, ಮತ್ತು ಬ್ರೇಕ್ವಾಟರ್ ಸಮುದ್ರಕ್ಕೆ ಬರುವ ಬಹಳಷ್ಟು ತ್ಯಾಜ್ಯವನ್ನು ನಿಲ್ಲಿಸುತ್ತದೆ.  ಹೀಗಾಗಿ ಬಹಳಷ್ಟು ಕಸವು ಬೆಂಗ್ರೆ ಪ್ರದೇಶದ ತೀರದಲ್ಲಿ ಸಂಗ್ರಹಗೊಳ್ಳುತ್ತದೆ. ಪ್ರವಾಸಿಗರು ತಾಣಕ್ಕೆ ಭೇಟಿ ನೀಡಿದಾಗ ಅನೇಕ ತಾಜ್ಯ ವಸ್ತುಗಳು ನದಿಗೆ ಅಥವಾ ಸಮುದ್ರಕ್ಕೆ ಹಾಕುತ್ತಾರೆ. ನಿಗಾ ವಹಿಸಲು ಸಿಸಿ ಕ್ಯಾಮೆರಾ ವನ್ನು ಅಳವಡಿಸಬೇಕು. ಇಂಥವರು ಕಂಡು ಬಂದಲ್ಲಿ ದಂಡ ವಿಧಿಸಬೇಕು ಎಂದರು.

ಬೆಂಗ್ರೆ ಪ್ರದೇಶದಲ್ಲಿ  ಕಸ ಮತ್ತು ಒಣ ಕಸ ಹಾಕಲು ಕಸದ ಬುಟ್ಟಿಯ ಉಪಯೋಗ ಮಾಡುವಂತೆ ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕ ಏರ್ಪಡಿಸಬೇಕು. ಬೆಂಗ್ರೆ ಪ್ರದೇಶವನ್ನು ಸ್ವಚ್ಛವಾಗಿಡುವ ನಿಟ್ಟಿನಲ್ಲಿ ಸ್ವಚ್ಛತಾ ಆಂದೋಲನ ಕಾರ್ಯಕ್ರಮ ನಡೆಸುತ್ತಿರುವುದು, ಈ ಮೂಲಕ ಸಾರ್ವಜನಿಕರಲ್ಲಿ ನೈರ್ಮಲೀಕರಣದ ಬಗ್ಗೆಯು ಜಾಗೃತಿ ಮೂಡಿಸಬಹುದು ಎಂದು ಮಾಹಿತಿ ನೀಡಿದರು.

ಸ್ವಚ್ಛ ಮಂಗಳೂರು ಅಭಿಯಾನ" ದಡಿ ಮಹಾನಗರ ಪಾಲಿಕೆಯ ಆಶ್ರಯದಲ್ಲಿ "ಬೆಂಗ್ರೆ ಸ್ವಚ್ಛತಾ ಆಂದೋಲನವು ಡಿಸೆಂಬರ್ 17 ರಂದು ನಡೆಯಲಾಗುವುದು ಈ ಸಂದರ್ಭದಲ್ಲಿ ಸುಮಾರು 25 ಸಾವಿರಕ್ಕಿಂತ ಹೆಚ್ಚಿನ ಜನರು ಭಾಗಿಯಾಗುವ ಸಂಭವವಿದೆ ಈ ಸಂದರ್ಭದಲ್ಲಿ ಕ್ರೀಡೆಗಳು, ಸಾಂಕೃತಿಕ ಕಾರ್ಯಕ್ರಮಗಳು, ಪಾರಂಪರಿಕ ಚಟುವಟಿಕೆಗಳು, ನಾಟಕ ಹೀಗೆ ಮುಂತಾದವು ಬೆಂಗ್ರೆಯಲ್ಲಿ ನಡೆಯಲಾಗುವುದು.ಎಂದು ಮೀನುಗಾರರ ಸಂಘದ ಅಧ್ಯಕ್ಷರಾದ ಚೇತನ್ ಬೆಂಗ್ರೆ ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದೈಷ್, ಅರಣ್ಯ ಇಲಾಖೆ, ಕೋಸ್ಟ್  ಗಾರ್ಡ್ ಮತ್ತು ವಿವಿಧ ಇಲಾಖೆಯವರು ಉಪಸ್ಥಿತರಿದ್ದರು.

# ಪೌರಕಾರ್ಮಿಕರ ನೇಮಕಾತಿ: ಮಹಾನಗರಪಾಲಿಕೆ ಸ್ಪಷ್ಟೀಕರಣ

ಮಂಗಳೂರು: ಮಂಗಳೂರು ಮಹಾನಗರಪಾಲಿಕೆಗೆ ನೇರಪಾವತಿಯಡಿ ಆಯ್ಕೆಗೊಂಡಿರುವ ಪೌರಕಾರ್ಮಿಕರ ವಿಚಾರಕ್ಕೆ ಸಂಬಂಧಿಸಿದಂತೆ ಮಹಾನಗರಪಾಲಿಕೆ  ವತಿಯಿಂದ ಈ ಕೆಳಗಿನಂತೆ ಸ್ಪಷ್ಟೀಕರಣ ನೀಡಲಾಗಿದೆ.

ಮಂಗಳೂರು ಮಹಾನಗರಪಾಲಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಹೊರಗುತ್ತಿಗೆ ಪೌರಕಾರ್ಮಿಕರನ್ನು ಪಾಲಿಕೆಯ ವೃಂದ ಮತ್ತು ನೇಮಕಾತಿ ನಿಯಮದಂತೆ ಮಂಜೂರಾದ ಪೌರಕಾರ್ಮಿಕರ ಹುದ್ದೆಗಳ ಪೈಕಿ ಸರ್ಕಾರ ಜಾರಿಗೆ ತಂದಿರುವ ವಿಶೇಷ ನೇಮಕಾತಿ ನಿಯಮಗಳಂತೆ ಶೇ. 50 ರಷ್ಟು ಹುದ್ದೆಗಳಿಗೆ ನೇರ ನೇಮಕಾತಿಗೊಂಡ ಪೌರಕಾರ್ಮಿಕರನ್ನು ಹೊರತುಪಡಿಸಿ ಉಳಿದ ಶೇ. 50 ರಷ್ಟು ಪೌರಕಾರ್ಮಿಕರ ಹುದ್ದೆಗಳನ್ನು ನೇರ ಪಾವತಿ ಮೂಲಕ ತೆಗೆದುಕೊಳ್ಳುವ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 126/ ಟಿಎಂಎಸ್ 2016; 2017 ರ ಆಗಸ್ಟ್ 7 ರಲ್ಲಿ ರೂಪಿಸಿರುವ ನಿಯಮದಂತೆ, ಹೊರಗುತ್ತಿಗೆ ಆದಾರದಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿಗೆ ಅನುಗುಣವಾಗಿ ಸೇವಾ ಜೇಷ್ಟತೆಯನ್ನು ಪರಿಗಣಿಸಿ ಪಟ್ಟಿಯನ್ನು ಸಿದ್ದಪಡಿಸಿಕೊಂಡು ಸಂಬಂಧಪಟ್ಟ ಆರೋಗ್ಯ ನಿರೀಕ್ಷಕರುಗಳಿಂದ ಎಲ್ಲಾ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಖಾತ್ರಿಪಡಿಸುವ ಸಲುವಾಗಿ ಪೌರಕಾರ್ಮಿಕರ ಜಿಪಿಎಸ್ ಪೇಟೋಗಳನ್ನು ಅಳವಡಿಸಿಕೊಂಡು ಸಂಬಂಧಪಟ್ಟ ಅಧಿಕಾರಿಗಳಿಂದ ದೃಡೀಕರಿಸಿ ಪಾಲಿಕೆಯ ಪರಿಷತ್ತಿನ ಸಮಾನ್ಯ ಸಭೆಯ ಠರಾವು ಸಂಖ್ಯೆ: ಮನಪಾ/1028/2023–24 ಅಕ್ಟೋಬರ್ 31  ರಂತೆ ಮಂಜೂರಾತಿ ಪಡೆದು ಅರ್ಹ ನೌಕರರನ್ನು ಕ್ರಮಬದ್ದವಾಗಿ ನಿಯಮಾನುಸಾರ ಆಯ್ಕೆ ಮಾಡಲಾಗಿರುತ್ತದೆ.

ಈ ಆಯ್ಕೆ ಪ್ರಕ್ರಿಯೆಯಿಂದ ಯಾರಿಗಾದರೂ ತೊಂದರೆ ಆಗಿದ್ದರೆ, ಬಾಧಿತರಾಗಿದ್ದರೆ ಅಥವಾ ಯಾವುದೇ ದೂರುಗಳಿದ್ದಲ್ಲಿ ಆಯುಕ್ತರ ಕಾರ್ಯಾಲಯಕ್ಕೆ ಸೂಕ್ತ ದಾಖಲಾತಿಗಳೊಂದಿಗೆ ಖುದ್ದಾಗಿ ಭೆಟಿಯಾಗಿ ಆಕ್ಷೇಪಣೆಯನ್ನು ಸಲ್ಲಿಸಬಹುದಾಗಿದೆ.

ಆದರೆ ಈ ರೀತಿ ವಿನಾಃ ಕಾರಣ ಯಾವುದೇ ಆಧಾರಗಳಿಲ್ಲದೆ ಸ್ವಹಿತಾಸಕ್ತಿಯಡಿ ಪಾಲಿಕೆಯ ವಿರುದ್ದ ಆರೋಪ ಮಾಡಿ ಮಾಧ್ಯಮಗಳಿಗೆ ಅನಪೇಕ್ಷಿತ ಹೇಳಿಕೆಗಳನ್ನು ನೀಡುತ್ತಾ ಪಾಲಿಕೆಯ ಗೌರವಕ್ಕೆ ದಕ್ಕೆ ತರುವವರ ಹಾಗೂ ಮುಜುಗರ ಉಂಟುಮಾಡುತ್ತಿರುವವರ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಸದ್ರಿ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಲೋಪಗಳು ಕಂಡು ಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ. ಯಾವುದೇ ಆಧಾರ ರಹಿತ ಆರೋಪಗಳಿಗೆ ಮತ್ತು ಊಹಾಪೋಹಗಳಿಗೆ ಕಿವಿಗೊಡದಂತೆ ಹಾಗೂ ಈ ಬಗ್ಗೆ ಯಾವುಧೇ ದೂರುಗಳಿದ್ದಲ್ಲಿ ಆಯುಕ್ತರನ್ನು ನೇರವಾಗಿ ಸಂಪರ್ಕಿಸುವಂತೆ ಸಾರ್ವಜನಿಕರಲ್ಲಿ ಮಹಾನಗರ ಪಾಲಿಕೆ ಆಯುಕ್ತರು ಮನವಿ ಮಾಡಿದ್ದಾರೆ.

# ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಂಟ್ವಾಳ ತಾಲೂಕು, ಫಳರಂಗಿಪೇಟೆ ಮೌಲಾನ ಆಜಾದ್ ಮಾದರಿ ಶಾಲೆ ಪುದು ಇಲ್ಲಿಗೆ ಗಣಿತ ವಿಷಯಕ್ಕೆ ಅತಿಥಿ ಶಿಕ್ಷಕರಿಂದ ಅರ್ಜಿ ಆಹ್ವಾನಿಸಲಾಗಿದೆ.

6ರಿಂದ 10ನೇ ತರಗತಿಗೆ ಗಣಿತ ವಿಷಯಕ್ಕೆ ಭೋದಿಸಲು ಬಿಎಸ್ಸಿ ಅಥವಾ ಬಿಎಸ್ಸಿ, ಬಿಎಡ್ ಪದವೀಧರರು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ  ದೂರವಾಣಿ ಸಂಖ್ಯೆ: 9742972679 ಸಂಪರ್ಕಿಸುವಂತೆ ಅಲ್ಪಸಂಖ್ಯಾತರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಉದ್ಯಮಶೀಲತೆ ತರಬೇತಿ

ಮಂಗಳೂರು: ಕೌಶಲ್ಯಾಭಿವೃದ್ಧಿ ಇಲಾಖಾ ವ್ಯಾಪ್ತಿಯಲ್ಲಿ ಸಿಡಾಕ್ ಸಂಸ್ಥೆಯ ಮೂಲಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಉದ್ಯಮಶೀಲತೆಯ ಬಗ್ಗೆ 10 ದಿನಗಳ ಉಚಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅರ್ಹ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ಸೈಟ್ ವಿಳಾಸ: https://www.scsptsp.karnataka.gov.in/BMS/CDOC/EDPRegistrationForm.aspx ಮೂಲಕ ಅರ್ಜಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ಸರ್ಕಾರಕ್ಕಿಂತಲೂ ಮೊದಲೇ ರಾಜ್ಯದಲ್ಲಿ ಸ್ಟಾರ್ಟಪ್ ನೀತಿ ಆರಂಭವಾಗಿತ್ತು: ಬೆಂಗಳೂರು ಟೆಕ್ ಸಮಿಟ್‌ನಲ್ಲಿ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕೇಂದ್ರ ಸರ್ಕಾರಕ್ಕಿಂತಲೂ ಮೊದಲೇ ಕರ್ನಾಟರದಲ್ಲಿ 2015ರಲ್ಲಿ ನಮ್ಮ ರಾಜ್ಯ ಸರ್ಕಾರ ಸ್ಟಾರ್ಟಪ್ ನೀತಿಯನ್ನು ಪ್ರಾರಂಭಿಸುವ ಮೂಲಕ ದೂರದೃಷ್ಟಿಯ ಹೆಜ್ಜೆಯನ್ನು ಇಟ್ಟಿತ್ತು ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.




ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಟೆಕ್ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, "2015 ರಲ್ಲಿ, ಭಾರತ ಸರ್ಕಾರವು ಕೇಂದ್ರ ಮಟ್ಟದ ಸ್ಟಾರ್ಟಅಪ್ ನೀತಿಯ ಅಗತ್ಯವನ್ನು ಗುರುತಿಸುವ ಮೊದಲೇ ನಮ್ಮ ರಾಜ್ಯ ಸರ್ಕಾರವು ಆರಂಭಿಕ ನೀತಿಯನ್ನು ಪ್ರಾರಂಭಿಸುವ ಮೂಲಕ ದೂರದೃಷ್ಟಿಯ ಹೆಜ್ಜೆಯನ್ನು ತೆಗೆದುಕೊಂಡಿತ್ತು. ಈ ದೂರದೃಷ್ಟಿಯು ಕರ್ನಾಟಕವನ್ನು ಸ್ಟಾರ್ಟಅಪ್ ಪರಿಸರ ವ್ಯವಸ್ಥೆಯ ಮುಂಚೂಣಿಗೆ ಕೊಂಡೊಯ್ದಿದೆ.

ಇದೇ ರೀತಿಯ ದಿಟ್ಟ ಹೆಜ್ಜೆಗಳ ಮೂಲಕ ರಾಜ್ಯ ಸರ್ಕಾರ ಸ್ಟಾರ್ಟಪ್ ಗಳ ಬೆಂಬಲಿಸುತ್ತದೆ. ನಮ್ಮ ಕ್ರಿಯಾತ್ಮಕ ಸ್ಥಿತಿಯನ್ನು ವ್ಯಾಖ್ಯಾನಿಸುವ ಉದ್ಯಮಶೀಲತಾ ಮನೋಭಾವ ಮುಂದುವರೆಯುತ್ತದೆ" ಎಂದು ಹೇಳಿದರು.

ಇನ್ನು ಕರ್ನಾಟಕ ಸರ್ಕಾರದ ವಾರ್ಷಿಕ ಜಾಗತಿಕ ಬೆಂಗಳೂರು ಟೆಕ್ ಶೃಂಗಸಭೆ (ಬಿಟಿಎಸ್) ಇಂದಿನಿಂದ ಆರಂಭವಾಗಿದ್ದು, 30ಕ್ಕೂ ಹೆಚ್ಚು ದೇಶಗಳ ಟೆಕ್ ನಾಯಕರು, ಸ್ಟಾರ್ಟಪ್‌ಗಳು, ಹೂಡಿಕೆದಾರರು ಮತ್ತು ಸಂಶೋಧನಾ ಪ್ರಯೋಗಾಲಯಗಳನ್ನು ಭಾಗವಹಿಸಿವೆ. ಕರ್ನಾಟಕ ಸರ್ಕಾರದ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯು ಕೇಂದ್ರ ಸರ್ಕಾರದ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ಸ್ ಆಫ್ ಇಂಡಿಯಾದೊಂದಿಗೆ ಆಯೋಜಿಸಿರುವ ಮೂರು ದಿನಗಳ 26 ನೇ ಬಿಟಿಎಸ್ 'ಬ್ರೇಕಿಂಗ್ ಬೌಂಡರೀಸ್' ಥೀಮ್‌ನೊಂದಿಗೆ ನಡೆಯುತ್ತಿದೆ.

ಕಝಾಕಿಸ್ತಾನ್‌ನ ಡಿಜಿಟಲ್ ಅಭಿವೃದ್ಧಿ, ಆವಿಷ್ಕಾರಗಳು ಮತ್ತು ಏರೋಸ್ಪೇಸ್ ಇಂಡಸ್ಟ್ರಿ ಸಚಿವ ಬಾಗ್ದತ್ ಮುಸ್ಸಿನ್ ಮತ್ತು ಸೆಮಿಕಂಡಕ್ಟರ್ ಕಂಪನಿ ಎಎಂಡಿ ಯ ಇವಿಪಿ ಮತ್ತು ಸಿಟಿಒ ಮಾರ್ಕ್ ಪೇಪರ್‌ಮಾಸ್ಟರ್ ಉದ್ಘಾಟನಾ ಸಮಾರಂಭದಲ್ಲಿ ವಿಐಪಿ ಗಣ್ಯರಾಗಿದ್ದಾರೆ.

**ಪ್ರಮುಖ ಉದ್ದಿಮೆದಾರರು ಭಾಗಿ**

ಶೃಂಗಸಭೆಯಲ್ಲಿ ಬಯೋಕಾನ್ ಲಿಮಿಟೆಡ್‌ನ ಕಾರ್ಯನಿರ್ವಾಹಕ ಅಧ್ಯಕ್ಷರಾದ ಕಿರಣ ಮಜುಂದಾರ್ ಶಾ, ಇನ್ಫೋಸಿಸ್ ಸಹ–ಸಂಸ್ಥಾಪಕರಾದ ಕ್ರಿಸ್ ಗೋಪಾಲಕೃಷ್ಣನ್, ಆಕ್ಸೆಲ್ ಪಾರ್ಟ್ನರ್ಸ್ ಇಂಡಿಯಾದ ಸ್ಥಾಪಕ ಪಾಲುದಾರ ಪ್ರಶಾಂತ್ ಪ್ರಕಾಶ್, ವಿಪ್ರೋ ಲಿಮಿಟೆಡ್‌ನ ಕಾರ್ಯನಿರ್ವಾಹಕ ಅಧ್ಯಕ್ಷ ರಿಷಾದ್ ಪ್ರೇಮ್‌ಜಿ ಭಾಗಿಯಾಗಲಿದ್ದಾರೆ. ಝೆರೋಧಾ ಸಹ–ಸಂಸ್ಥಾಪಕ ನಿಖಿಲ್ ಕಾಮತ್ ಅವರು ಇನ್ಫೋಸಿಸ್ ಸಂಸ್ಥಾಪಕ ಎನ್ ಆರ್ ನಾರಾಯಣ ಮೂರ್ತಿ ವಿಶೇಷ ಭಾಷಣ ಮಾಡಲಿದ್ದಾರೆ.

# ಯಾರಿಂದಲೂ ಸಿಎಎ ಜಾರಿ ತಡೆಯಲು ಸಾಧ್ಯವಿಲ್ಲ: ಕೇಂದ್ರ ಗೃಹ ಸಚಿವ ಅಮಿತ್ ಶಾ

ಕೋಲ್ಕತಾ: ಕೇಂದ್ರದ ಎನ್ ಡಿಎ ಸರ್ಕಾರದ ಪೌರತ್ವ (ತಿದ್ದುಪಡಿ) ಕಾಯ್ದೆಯನ್ನು ಜಾರಿಗೆ ತರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತಾದಲ್ಲಿ ನಡೆದ ಬಿಜೆಪಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಸರ್ಕಾರದ ಪೌರತ್ವ (ತಿದ್ದುಪಡಿ) ಕಾಯ್ದೆಯನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಕೇಂದ್ರ ಸರ್ಕಾರ ಅದನ್ನು ಜಾರಿಗೊಳಿಸುವುದು ಶತಃಸಿದ್ಧ ಎಂದು ಗೃಹ ಸಚಿವ ಅಮಿತ್ ಶಾ ಬುಧವಾರ ಪ್ರತಿಪಾದಿಸಿದರು.



'ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅಲ್ಪ ಸಂಖ್ಯಾತರ ಓಲೈಕೆಯಲ್ಲಿ ತೊಡಗಿದ್ದು, ತುಷ್ಟೀಕರಣ ರಾಜಕೀಯ ಈ ಬಾರಿ ಕೆಲಸ ಮಾಡುವುದಿಲ್ಲ ಎಂದು ಹೇಳಿದರು. ಅಂತೆಯೇ ಅಕ್ರಮ ಒಳನುಸುಳುವಿಕೆ, ಭ್ರಷ್ಟಾಚಾರ ಮತ್ತು ರಾಜಕೀಯ ಹಿಂಸಾಚಾರದ ವಿಷಯಗಳ ಬಗ್ಗೆ ಬಿರುಸಿನ ವಾಗ್ದಾಳಿ ನಡೆಸಿದ ಅವರು, ಈ ಬಾರಿ ಚುನಾವಣೆಯಲ್ಲಿ ಮಮತಾ ಅವರ ಸರ್ಕಾರವನ್ನು ಹೊರಹಾಕಿ ಮುಂದಿನ ದಿನಗಳಲ್ಲಿ ಬಿಜೆಪಿಯನ್ನು ಆಯ್ಕೆ ಮಾಡುವಂತೆ ಜನರಿಗೆ ಮನವಿ ಮಾಡಿದರು.

ರ್ಯಾಲಿಯಲ್ಲಿ ಸೇರಿರುವ ಜನರ ಸಂಖ್ಯೆ ಜನರ ಮನಸ್ಥಿತಿಯನ್ನು ಸೂಚಿಸುತ್ತದೆ ಮತ್ತು 2026 ರಲ್ಲಿ ರಾಜ್ಯದಲ್ಲಿ ಬಿಜೆಪಿ ಮೂರನೇ ಎರಡರಷ್ಟು ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ. 2024 ರ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿಯ ಸಾಧನೆಯು ವಿಧಾನಸಭಾ ಚುನಾವಣೆಯಲ್ಲಿ ಅದರ ಗೆಲುವಿನ ಅಡಿಪಾಯವನ್ನು ಸೃಷ್ಟಿಸುತ್ತದೆ ಎಂದರು.

ಸಿಎಎ ವಿವಾದಿತಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅಮಿತ್ ಶಾ, ಮಮತಾ ಬ್ಯಾನರ್ಜಿ ಇದನ್ನು ವಿರೋಧಿಸುತ್ತಿದ್ದಾರೆ. ಆದರೆ ಯಾರೊಬ್ಬರೂ ಅದರ ಅನುಷ್ಠಾನವನ್ನು ತಡೆಯಲು ಸಾಧ್ಯವಿಲ್ಲ ಎಂದರು. 2019 ರಲ್ಲಿ ರಾಜ್ಯದ 42 ಸ್ಥಾನಗಳಲ್ಲಿ ಪಕ್ಷವು 18 ಸ್ಥಾನಗಳನ್ನು ಗೆದ್ದುಕೊಂಡಿದ್ದು, ಇದು ಬಂಗಾಳದಲ್ಲಿ ಬಿಜೆಪಿ ಗಳಿಸಿದ ಈವರೆಗಿನ ಅತ್ಯಧಿಕ ಸ್ಥಾನಗಳಾಗಿವೆ.

# ಚೀನಾದಲ್ಲಿ ಹೊಸ ಮಾದರಿಯ ಸೋಂಕು: ರಾಜ್ಯ ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಪ್ರಕಟ

ಬೆಂಗಳೂರು: ಚೀನಾದಲ್ಲಿ ಮಕ್ಕಳಲ್ಲಿ ಉಸಿರಾಟದ ಸಮಸ್ಯೆ ಹೆಚ್ಚಾಗುತ್ತಿರುವ ವರದಿಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಆರೋಗ್ಯ ಇಲಾಖೆಯು ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ಸಾರ್ವಜನಿಕ ಆರೋಗ್ಯ ಮತ್ತು ಆಸ್ಪತ್ರೆಯ ಸನ್ನದ್ಧತೆಯ ಕ್ರಮಗಳನ್ನು ತಕ್ಷಣವೇ ಪರಿಶೀಲಿಸುವಂತೆ ಕೇಂದ್ರ ಸರ್ಕಾರ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸಲಹೆ ನೀಡಿದ ನಂತರ ರಾಜ್ಯ ಆರೋಗ್ಯ ಇಲಾಖೆಯಿಂದ ಈ ಕ್ರಮ ಕೈಗೊಳ್ಳಲಾಗಿದೆ.



ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತ ಡಿ. ರಂದೀಪ್ ಅವರು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಸಿಬ್ಬಂದಿ ಮಾಸ್ಕ್ ಧರಿಸುವುದು ಕಡ್ಡಾಯಗೊಳಿಸಲಾಗಿದೆ.

ಇದು ಸಾಮಾನ್ಯ ಸಾಂಕ್ರಾಮಿಕ ಕಾಯಿಲೆಯಾಗಿದ್ದು, ಕಡಿಮೆ ತೀವ್ರತೆ ಹೊಂದಿದ. ಇದು ಸಾಮಾನ್ಯವಾಗಿ ಐದರಿಂದ ಏಳು ದಿನಗಳವರೆಗೆ ಇರುತ್ತದೆ.

ಆದಾಗ್ಯೂ, ಇದು ಮಕ್ಕಳಿಗೆ, ವೃದ್ಧರಿಗೆ, ಗರ್ಭಿಣಿಯರಿಗೆ, ಇಮ್ಯುನೊಕೊಂಪ್ರೊಮೈಸ್ಡ್ ಮತ್ತು ದೀರ್ಘಕಾಲೀನ ಔಷಧಿಗಳಾದ ಸ್ಟೆರಾಯ್ಡ್‌ಗಳನ್ನು ತೆಗೆದುಕೊಳ್ಳುವವರಿಗೆ ಹೆಚ್ಚಿನ ಅಪಾಯವನ್ನುಂಟುಮಾಡುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.

ಜ್ವರ, ಶೀತ, ಅಸ್ವಸ್ಥತೆ, ಹಸಿವಿನ ಕೊರತೆ, ವಾಕರಿಕೆ, ಸೀನುವಿಕೆ ಮತ್ತು ಒಣ ಕೆಮ್ಮು ಈ ರೋಗದ ಲಕ್ಷಣಗಳಾಗಿವೆ.

ಹೀಗಾಗಿ ಕೆಮ್ಮುವಾಗ ಅಥವಾ ಸೀನುವಾಗ ನಿಮ್ಮ ಬಾಯಿ ಮತ್ತು ಮೂಗನ್ನು ಕರವಸ್ತ್ರದಿಂದ ಮುಚ್ಚಿಕೊಳ್ಳಬೇಕು.

ಸಾಬೂನು ಮತ್ತು ನೀರಿನಿಂದ ನಿಮ್ಮ ಕೈಗಳನ್ನು ಆಗಾಗ್ಗೆ ತೊಳೆದುಕೊಳ್ಳಬೇಕು. ಕಣ್ಣು, ಮೂಗು ಅಥವಾ ಬಾಯಿಯನ್ನು ಅನಗತ್ಯವಾಗಿ ಸ್ಪರ್ಶಿಸುವುದನ್ನು ತಪ್ಪಿಸಬೇಕು. ಜನಸಂದಣಿ ಇರುವ ಸ್ಥಳಗಳಿಗೆ ಭೇಟಿ ನೀಡುವುದನ್ನು ತಪ್ಪಿಸಿ ಮತ್ತು ಅಂತಹ ಸ್ಥಳಗಳಿಗೆ ಭೇಟಿ ನೀಡಿದರೆ ಫೇಸ್ ಮಾಸ್ಕ್ ಬಳಸುವುದು ಉತ್ತಮ. ಫ್ಲೂ ಪೀಡಿತ ವ್ಯಕ್ತಿಗಳಿಂದ ಕನಿಷ್ಠ ಅಂತರವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಲಾಗಿದೆ.

# ದೈಹಿಕ ಮತ್ತು ಮಾನಸಿಕ ನೆಮ್ಮದಿಗೆ ಕ್ರೀಡೆ ಸಹಕಾರಿ: ನ್ಯಾ.ಮಂಜುನಾಥ ನಾಯಕ್

ಶಿವಮೊಗ್ಗ: ದಿನನಿತ್ಯ ಕೆಲಸದ ಒತ್ತಡದಲ್ಲಿಯೇ ದಿನಕಳೆಯುವ ಪೊಲೀಸ್ ಅಧಿಕಾರಿ–ಸಿಬ್ಬಂಧಿಗಳು ಕ್ರೀಡೆ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವುದರಿಂದ ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ವಿಕಾಸಕ್ಕೆ ಸಹಕಾರಿಯಾಗಲಿದೆ ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಾಧೀಶ ಮಂಜುನಾಥ ನಾಯ್ಕ್ ಅವರು ಹೇಳಿದರು.

ಅವರು ಶಿವಮೊಗ್ಗ ಜಿಲ್ಲಾ ಪೊಲೀಸ್ ಘಟಕವು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಲಾಗಿದ್ದ ವಾರ್ಷಿಕ ಕ್ರೀಡಾಕೂಟವನ್ನು ಬಲೂನು ಹಾರಿಬಿಡುವ ಮೂಲಕ ಉದ್ಘಾಟಿಸಿ ಮಾತನಾಡುತ್ತಿದ್ದರು. ಕ್ರೀಡೆಯು ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ವಿಕಾಸಕ್ಕೆ ಮಾತ್ರವಲ್ಲದೆ ವ್ಯಕ್ತಿ ದಿನವಿಡೀ



ಸದಾ ಲವಲವಿಕೆಯಿಂದಿರಲು, ಉಲ್ಲಸಿತನಾಗಿ ರುವಲ್ಲಿ ಸಹಕಾರಿ ಯಾಗಲಿದೆ. ಇದರಿಂದ ವೃತ್ತಿಜೀವನ ಸಂತಸದಾಯಕ ವಾಗಿರಲಿದೆ ಎಂದವರು ನುಡಿದರು.

ಸೋಲು ಸಾಮಾನ್ಯ ಸಂಗತಿ. ಪ್ರತಿ ಹಂತದಲ್ಲೂ ಗೆಲುವನ್ನೇ ನಿರೀಕ್ಷಿಸುವುದು ಸಾಧ್ಯವಿಲ್ಲ. ಅನೇಕ ಸಂದರ್ಭಗಳಲ್ಲಿ ಸೋಲುಗಳು ವ್ಯಾವಹಾರಿಕ ಬದುಕಿನಲ್ಲಿ ಗೆಲ್ಲುವುದನ್ನು, ಸವಾಲುಗಳಿಗೆ ಮುಖಾಮುಖಿಯಾಗುವುದನ್ನು ತಿಳಿಸುತ್ತವೆ. ಸೋಲು ಮುಂದಿನ ಗೆಲುವಿಗೆ ಮುನ್ನುಡಿಯಾಗುತ್ತವೆ ಎಂದರು.

ಕ್ರೀಡೆಯು ವ್ಯಕ್ತಿಗೆ ಉಲ್ಲಾಸದಾಯಕ ವಾತಾವರಣ ನಿರ್ಮಿಸಲು ಸಹಕಾರಿಯಾಗಿರು ವಂತೆಯೇ ತನ್ನಲ್ಲಿ ಸುಪ್ತವಾಗಿರುವ ಪ್ರತಿಭೆಯ ಅನಾವರಣಕ್ಕೆ ವೇದಿಕೆಯಾಗಲಿದೆ. ಆದ್ದರಿಂದ ಪ್ರತಿಯೊಬ್ಬರೂ ಸದಾ ಲವಲವಿಕೆಯಿಂದಿರಲು, ಕಾರ್ಯಕ್ಷೇತ್ರದಲ್ಲಿ ಉತ್ಸುಕರಾಗಿರಲು ಪೂರಕ ವಾತಾವರಣ ನಿರ್ಮಾಣವಾಗಲಿದೆ ಎಂದರು.

ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ಜಿ.ಕೆ.ಮಿಥುನ್ಕುಮಾರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಅನಿಲ್ಕುಮಾರ್ ಭೂಮರೆಡ್ಡಿ ಸೇರಿದಂತೆ ಜಿಲ್ಲೆಯ ಎಲ್ಲಾ ಠಾಣೆಗಳ ಪೊಲೀಸ್ ಅಧಿಕಾರಿ–ಸಿಬ್ಬಂಧಿಗಳು ಹಾಗೂ ಕ್ರೀಡಾಳುಗಳು ಉಪಸ್ಥಿತರಿದ್ದರು.

# ರಾಕ್‌ಲೈನ್ ವೆಂಕಟೇಶ್ ಸೋದರನ ಮನೆಯಲ್ಲಿ ಕಳ್ಳತನ

## 7 ನೇಪಾಳಿ ಪ್ರಜೆಗಳ ಬಂಧನ, 3 ಕೆಜಿ ಚಿನ್ನ ವಶ



ಬೆಂಗಳೂರು: ನಿರ್ಮಾಪಕ ರಾಕ್‌ಲೈನ್ ವೆಂಕಟೇಶ್ ಅವರ ಸಹೋದರನ ಮನೆಯಲ್ಲಿ ಕಳ್ಳತನವಾದ ಒಂದು ತಿಂಗಳ ನಂತರ, ಪೊಲೀಸರು ಏಳು ನೇಪಾಳಿಗರ ತಂಡವನ್ನು ಬಂಧಿಸಿದ್ದಾರೆ ಮತ್ತು ಬಂಧಿತರಿಂದ 3 ಕೆಜಿ ಚಿನ್ನ ಸೇರಿದಂತೆ 1.53 ಕೋಟಿ ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಬಂಧಿತರನ್ನು ಉಪೇಂದ್ರ, ನಾರಾ ಬಹದ್ದೂರ್, ಖಕೇಂದ್ರ ಶಾಹಿ, ಕೋಮಲ್, ಸ್ವಸ್ತಿಕಾ, ಪಾರ್ವತಿ ಮತ್ತು ಶಾದಲಾ ಎಂದು ಗುರುತಿಸಲಾಗಿದೆ.

ಆರೋಪಿಗಳು ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ನಿವಾಸದಿಂದ ಸುಮಾರು ಐದು ಕೆಜಿ ಚಿನ್ನಾಭರಣ ಮತ್ತು ನಗದು ಕಳವು ಮಾಡಿದ್ದರು. ಅಕ್ಟೋಬರ್ 21 ಮತ್ತು 29ರ ನಡುವೆ 58 ವರ್ಷದ ಟಿಎನ್ ಬ್ರಮರೇಶ್ ಅವರ ನಿವಾಸದಲ್ಲಿ ಅವರು ಮತ್ತು ಅವರ ಕುಟುಂಬ ಗ್ರೀಸ್‌ಗೆ ತೆರಳಿದ್ದಾಗ ಕಳ್ಳತನ ನಡೆದಿತ್ತು. ಪ್ರವಾಸದಿಂದ ಮರಳಿದ ಬಳಿಕ ಕಳ್ಳತನ ನಡೆದಿರುವುದು ಬೆಳಕಿಗೆ ಬಂದಿತ್ತು. ಚಿನ್ನಾಭರಣ ಸೇರಿ 6.1 ಲಕ್ಷ ರೂ. ನಗದನ್ನು ಆರೋಪಿಗಳು ಕಳವು ಮಾಡಿದ್ದರು. ಆರೋಪಿಗಳು ದರೋಡೆಗಾಗಿ ಅಲ್ಮೇರಾಗಳನ್ನು ಒಡೆದಿದ್ದಾರೆ. 'ಆರೋಪಿಗಳ ಪೈಕಿ ಒಬ್ಬಾತ ನಿವಾಸದ ಪಕ್ಕದಲ್ಲಿರುವ ನಿರ್ಮಾಣ ಹಂತದ ಕಟ್ಟಡದಲ್ಲಿ ಭದ್ರತಾ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದನು. ಒಂದು ತಿಂಗಳಿನಿಂದ ನಿವಾಸದಲ್ಲಿನವರ ಚಲನವಲನಗಳನ್ನು ತಂಡವು ಗಮನಿಸಿತ್ತು. ಕುಟುಂಬಸ್ಥರು ಪ್ರವಾಸಕ್ಕೆ ತೆರಳಿದ ನಂತರ, ಕಳ್ಳತನ ಮಾಡಲಾಗಿತ್ತು. ಪ್ರಮುಖ ಆರೋಪಿ ಉಪೇಂದ್ರ ಇಂತದ್ದೇ ಕೃತ್ಯಗಳಲ್ಲಿ ನಿತ್ಯ ತೊಡಗಿಕೊಂಡಿದ್ದು, ಆತನ ವಿರುದ್ಧ ನಗರ ಠಾಣೆಯಲ್ಲಿ 10ಕ್ಕೂ ಹೆಚ್ಚು ಪ್ರಕರಣಗಳಿವೆ' ಎಂದು ಅಧಿಕಾರಿಯೊಬ್ಬರು ತಿಳಿಸಿದರು.

ಬಂಧಿತರ ಕುರಿತು ಮಾಹಿತಿ ನೀಡಿದ ನಗರ ಪೊಲೀಸ್ ಆಯುಕ್ತ ಬಿ ದಯಾನಂದ, ಸಾರ್ವಜನಿಕರು ದೀರ್ಘಾವಧಿಯವರೆಗೆ ಹೊರಗೆ ಹೋಗುವಾಗ ಎಚ್ಚರಿಕೆ ವಹಿಸುವಂತೆ ಸಲಹೆ ನೀಡಿದರು. ಈ ಬಗ್ಗೆ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಬಹುದು ಎಂದು ತಿಳಿಸಿದರು.

# ಸುವರ್ಣ ವಿಧಾನ ಸೌಧದ ಸುತ್ತಲೂ ಕಲಂ 144 ಜಾರಿ

ಬೆಳಗಾವಿ: ಹಿರೇಬಾಗೇವಾಡಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಸುವರ್ಣ ವಿಧಾನ ಸೌಧದಲ್ಲಿ ಡಿಸೆಂಬರ್.04 ರಿಂದ ಡಿ.15 2023 ವರೆಗೆ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತತೆ ಕಾಪಾಡುವ ಹಿತದೃಷ್ಟಿಯಿಂದ "ಸುವರ್ಣಸೌಧದ ಪೂರ್ವ ಕಡೆಗೆ ಶೆಗನಮಟ್ಟಿ ಜಮೀನ 500 ಮೀಟರ್ ಅಂತರ, ಉತ್ತರಕ್ಕೆ ಸುವರ್ಣ ಗಾರ್ಡನ್ ಕಲ್ಯಾಣ ಮಂಟಪದವರೆಗೆ 500 ಮೀಟರ್ ಹಾಗೂ ಪಶ್ಚಿಮಕ್ಕೆ ರಾಷ್ಟ್ರೀಯ ಹೆದ್ದಾರಿಯ ಆಚೆಗೆ ಇರುವ ಸಂಪೂರ್ಣ ಗಾರ್ಡನ್ ಹೊಟೇಲ್‌ದವರೆಗೆ 500 ಮೀಟರ್ ಅಂತರ ಮತ್ತು ದಕ್ಷಿಣ ದಿಕ್ಕಿನ ಕಡೆಗೆ ಟೋಯೋಟಾ ಶೋರೂಮ್ ವರೆಗೆ 500 ಮೀಟರ್ ಅಂತರ" ದಲ್ಲಿ ಸುವರ್ಣ ವಿಧಾನ ಸೌಧದ ಸುತ್ತಲೂ ಸುಮಾರು 500 ಮೀಟರ್ ಸುತ್ತಳತೆಯಲ್ಲಿ ಡಿ.01 ರಿಂದ ಡಿ.30 2023 ರವರೆಗೆ ಸಿಆರ್‌ಪಿಸಿ 144 ರಡಿ ನಿಷೇಧಾಜ್ಞೆ ಹೊರಡಿಸಲಾಗಿದೆ.

ಬೆಳಗಾವಿ ನಗರದ ಸುವರ್ಣ ಸೌಧದ ಎಡಬದಿಯಿಂದ ಟೋಯಟಾ ಶೋರೂಮ್ ವರೆಗೆ ಮತ್ತು ಸುವರ್ಣ ಸೌಧದ ಬಲಬದಿ ದಿಂದ ಹಲಗಾ ಗ್ರಾಮದವರೆಗೆ ಅದರಂತೆ ಎದುರುಗಡೆ ಜೀನಗೌಡಾ ಆಸ್ಪತ್ರೆ ವರೆಗೆ 500 ಮೀಟರ್ ವ್ಯಾಪ್ತಿಯಲ್ಲಿ 05 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ.

ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗದೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನು ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಕಲ್ಲುಗಳನ್ನು, ಕ್ಷಾರಪದಾರ್ಥ, ಪಟಾಕಿ ಇಲ್ಲವೆ ಸ್ಪೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.

ಕಲ್ಲುಗಳನ್ನು ಮತ್ತು ಎಸೆಯುವಂತಹ ವಸ್ತುಗಳನ್ನು ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ಪ್ರತಿಬಂಧಿಸಲಾಗಿದೆ.

ಸುವರ್ಣ ಸೌಧದ ಸುತ್ತಮುತ್ತಲಿನ 500 ಮೀಟರ್ ವ್ಯಾಪ್ತಿಯಲ್ಲಿ ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕರ ಗಾಂಭಿರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ಪ್ರತಿಬಂಧಿಸಲಾಗಿದೆ.

ಯಾವುದೇ ಮಾರಕಾಸ್ತ್ರಗಳು, ಸ್ಪೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂತಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೆ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು.

ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಇತರೆ ಧಾರ್ಮಿಕ ಮೆರವಣಿಗೆಗಳು ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರದಂತೆ ನಿಯಮಗಳನ್ನು ಪಾಲಿಬೇಕು.

ರಾಷ್ಟ್ರೀಯ ಹೆದ್ದಾರಿ–04ರಲ್ಲಿ ರಸ್ತೆ ತಡೆ ಮಾಡಿ ಪ್ರತಿಭಟನೆ ಮಾಡುವದು, ರಾಷ್ಟ್ರೀಯ ಹೆದ್ದಾರಿಯ ಸಂಚಾರಕ್ಕೆ ತಡೆ ಒಡ್ಡಿ ಹೆದ್ದಾರಿಯಲ್ಲಿ ಓಡಾಡುತ್ತಿರುವ ಅವಶ್ಯಕ ರೋಗಿಗಳನ್ನು ಸಾಗಿಸುವ ಅಂಬುಲೆನ್ಸ್ ಹಾಗೂ ಇತರೆ ಅವಶ್ಯಕ ವಸ್ತುಗಳನ್ನು ಸಾಗಿಸುವ ವಾಹನಗಳನ್ನು ತಡೆದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವದು.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಪ್ರಕ್ರೀಯೆ ಸಂಹಿತೆಯ ಕಲಂ 188ರ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿಗಳಾದ ಎಸ್. ಎನ್. ಸಿದ್ದರಾಮಪ್ಪಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕಿತ್ತೂರ ರಾಣಿ ಚನ್ನಮ್ಮಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ**

ಶಾಖೆ:– ಹಿರೇಬಾಗೇವಾಡಿ ತಾ/ಜಿ: ಬೆಳಗಾವಿ

**ಹರಾಜು ಪ್ರಕಟಣೆ**

**ಇಪಿ ಸಂಖ್ಯೆ:ಕ.ರಾ.ಸೌ.ಸಂ.ಸ.ನಿ/ಸ.ಸಂ.ಸ.ನಿ/ವ.ಅ.ಬೆ/108/2022–23**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಬೈಲಹೊಂಗಲ ಶಾಖೆ–ಹಿರೇಬಾಗೇವಾಡಿ ಸುಸ್ತಿದಾರರಾದ 1) ಶ್ರೀಮತಿ ಚನ್ನವ್ವಾ ಸೋಮಪ್ಪ ತಳವಾರ ಸಾ: ಹಾಲಗಿಮರ್ಡಿ ತಾ/ಜಿ ಬೆಳಗಾವಿ ಹಾಗೂ 2) ಶ್ರೀಮತಿ ಭಿಮವ್ವ ಚಂದ್ರಶೇಖರ ತಳವಾರ 3) ಶ್ರೀ ಚಂದ್ರಶೇಖರ ನಾಗಪ್ಪಾ ತಳವಾರ ಇವರಿಂದ ದಿನಾಂಕ: 27/10/2023ಕ್ಕೆ ಬರಬೇಕಾದ ಬಾಕಿ ಮೊತ್ತರೂ. 71,646+ ಬಡ್ಡಿ ಮತ್ತು ಇತರೆ ವೆಚ್ಚಗಳಸಂದಾಯದ ಬಗ್ಗೆ ಈ ಕೆಳಗೆ ನಮೂದಿಸಲಾದ ಸ್ಥಿರ ಸ್ವತ್ತುಗಳ ಹರಾಜನ್ನು ಬುಧವಾರ ದಿನಾಂಕ: 13/12/2023 ರಂದು ಬಹಿರಂಗ ಹರಾಜು ಮಾಡಲಾಗುವುದು ಅಥವಾ ಹರಾಜನ್ನು ಮುಂದೂಡಲಾದ ದಿನಾಂಕದಂದು ಸ್ಥಿರ ಸ್ವತ್ತುಗಳಿರುವ ಕೆ.ಕೆ.ಕೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಾಲಗಿಮರ್ಡಿ ಗ್ರಾಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದೆಂದು ತಿಳಿಸಲಾಗಿದೆ. ಸದರಿ ಹರಾಜು ಬೆಳ್ಳಗ್ಗೆ 11:00 ಘಂಟೆಗೆ ಪ್ರಾರಂಭವಾಗಿ ಅತ್ಯಧಿಕ ಮೊತ್ತಕ್ಕೆ ಬಿಡ್ ಕೂಗುವವರಿಗೆ ಸ್ವತ್ತನ್ನು ಮೂರು ಸಲಕ್ಕಾಗಿ ಖಾಯಂ ಮಾಡಲಾಗುವುದು.

ಸ್ಥಿರ ಸ್ವತ್ತುಗಳ ವಿವರ:– 1)ಶ್ರೀಮತಿ ಚನ್ನವ್ವ ಸೋಮಪ್ಪ ತಳವಾರ ಸಾ॥ ಹಾಲಗಿಮರ್ಡಿ ಗ್ರಾಮ ಪಂಚಾಯತಿ ಆಸ್ತಿ  ನಂ:4 ತಾ/ಜಿ: ಬೆಳಗಾವಿ ಹಾಲಗಿಮರ್ಡಿ ಗ್ರಾಮದ ಕೆ.ಕೆ.ಕೊಪ್ಪ ಗ್ರಾಮ ಪಂಚಾಯತಿಯ ಆಸ್ತಿಯಾಗಿರುತ್ತದೆ.

**ಹರಾಜು ಬಗ್ಗೆ ಸಂಪರ್ಕಿಸಬೇಕಾದ ವಿಳಾಸ**

**: ಮಾರಾಟಾಧಿಕಾರಿಗಳು :**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ

ಪ್ರಧಾನ ಕಛೇರಿ: ಬೈಲಹೊಂಗಲ ಶಾಖೆ:–ಹಿರೇಬಾಗೇವಾಡಿ

ಮೊಬೈಲ್ ನಂ:9606098032, 7259001979

# ಕಂದಾಯ ಇಲಾಖೆಯಲ್ಲಿ ತ್ವರಿತಗತಿಯಲ್ಲಿ ಪ್ರಕರಣಗಳ ವಿಲೇವಾರಿ: ಜಿಲ್ಲಾಧಿಕಾರಿಗಳ ಗುರುದತ್ತ ಹೆಗಡೆ

ಧಾರವಾಡ: ಕಂದಾಯ ಇಲಾಖೆಯ ಸಚಿವರಾದ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಕಂದಾಯ ಇಲಾಖೆಯಲ್ಲಿ ಕಳೆದ 6 ತಿಂಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ತ್ವರಿತಗತಿಯಲ್ಲಿ ವಿವಿಧ ಪ್ರಕಟಣಗಳ ವಿಲೇವಾರಿಯನ್ನು ಮಾಡಲಾಗುತ್ತಿದೆ. ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ಈ ಕುರಿತು ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು. ತ್ವರಿತಗತಿಯಲ್ಲಿ ಕಂದಾಯ ನ್ಯಾಯಾಲಯದ ಪ್ರಕರಣಗಳ ಇತ್ಯರ್ಥ, ಭೂಮಿ ಮ್ಯುಟೇಶನ್, ಭೂಮಿ ತಂತ್ರಾಂಶ, ಪೈಕಿ ಪಹಣಿ ಪೇಡಿ,ಇ–ಆಫಿಸ್ ಭೂ ಸರ್ವೇನೊಂದಣಿ ಮುಂತಾದ ವಿಭಾಗಗಳಲ್ಲಿ ಉತ್ತಮ ಬದಲಾವಣೆಗಳಾಗಿದ್ದು ತ್ವರಿತಗತಿಯಲ್ಲಿ ಪ್ರಕರಣಗಳ ವಿಲೇವಾರಿಯಾಗುತ್ತಿದೆಯೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ 6 ತಿಂಗಳ ಅವಧಿಯಲ್ಲಿ ತಹಶೀಲದಾರರ ನ್ಯಾಯಾಲಯಗಳಲ್ಲಿ ಒಂದು ವರ್ಷ ಮೇಲ್ಪಟ್ಟು ಬಾಕಿ ಇರುವ 22 ಕಂದಾಯ ನ್ಯಾಯಾಲಯ ಪ್ರಕರಣಗಳನ್ನು ವಿಲೇವಾರಿಗೊಳಿಸಲಾಗಿದೆ. ಜಿಲ್ಲೆಯಲ್ಲಿ ಸ್ವೀಕೃತವಾದ ಒಟ್ಟು 848 ಪ್ರಕರಣಗಳ ಪೈಕಿ 742 ಪ್ರಕರಣಗಳನ್ನು ಕಾಲಕಾಲಕ್ಕೆ ವಿಚಾರಣೆ ಕೈಕೊಂಡು ಇತ್ಯರ್ಥಪಡಿಸಲಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿ 107 ಪ್ರಕರಣಗಳು ಬಾಕಿ ಇದ್ದು, ವಿಲೇವಾರಿಗೊಳಿಸಲು ಕ್ರಮ ಕೈಕೊಳ್ಳಲಾಗುತ್ತಿದೆ. ಎಲ್ಲ ಕಂದಾಯ ನ್ಯಾಯಾಲಯ ಪ್ರಕಣಗಳ ವಿಚಾರಣೆಯನ್ನು ವಾರದ ಪ್ರತಿ ಮಂಗಳವಾರ ಹಾಗೂ ಗುರುವಾರ 2 ದಿನ ಕೈಕೊಂಡು 3 ತಿಂಗಳ ಅವಧಿಯೊಳಗಾಗಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಭೂಮಿ ತಂತ್ರಾಂಶದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಜಮೀನುಗಳ ಪರಭಾರೆ ಕಾಯ್ದೆ(ಪಿ.ಟಿ.ಸಿ.ಎಲ್), ನಾನ್ ಪಿ.ಟಿ.ಸಿ.ಎಲ್ ಹಾಗೂ ಸರಕಾರಿ ಜಮೀನುಗಳ ವಿವರಗಳನ್ನು ಗೇಣಿ ಮತ್ತು ಪಹಣಿ ಪತ್ರಿಕೆಗಳಲ್ಲಿ ದಾಖಲಿಸಲು ಈಗಾಗಲೇ ಕ್ರಮ ಕೈಕೊಳ್ಳಲಾಗಿದೆ. ಈ ವಿಷಯವಾಗಿ ಭೂಮಿ ತಂತ್ರಾಂಶದಲ್ಲಿ ಪಿ.ಟಿ.ಸಿ.ಎಲ್. ಜಮೀನುಗಳನ್ನು ಪ್ಲ್ಯಾಗ್ ಮಾಡುವದರಿಂದ ಪಿ.ಟಿ.ಸಿ.ಎಲ್.



ಕಾಯ್ದೆ ಉಲ್ಲಂಘನೆಯಾಗುವ ಸಂಭವವನ್ನು ತಪ್ಪಿಸಬಹುದಾಗಿದೆ. ಇದರಿಂದಾಗಿ ಸರಕಾರಿ ಜಮೀನುಗಳಲ್ಲಿ ಆಗುವ ಒತ್ತುವರಿಯನ್ನು ತಡೆಗಟ್ಟಬಹುದಾಗಿದೆ ಎಂದರು.

ಭೂಮಿ ತಂತ್ರಾಂಶದಲ್ಲಿ ನೋಟೀಸ್ ರಹಿತ ಹಕ್ಕು ದಾಖಲಾತಿಗಳ ವಿಲೇವಾರಿಯಲ್ಲಿ ಶೇ.99.71% ರಷ್ಟು ಪ್ರಗತಿ ಸಾಧಿಸಲಾಗಿದೆ. ನೋಟೀಸು ಸಹಿತ ಹಕ್ಕು ದಾಖಲಾತಿಗಳ ವಿಲೇವಾರಿಯಲ್ಲಿ ಶೇ.96.78% ರಷ್ಟು ಪ್ರಗತಿ ಸಾಧಿಸಲಾಗಿದೆ. ತಕರಾರು ಸ್ವೀಕೃತವಾದ ಹಕ್ಕುದಾಖಲಾತಿಗಳ ವಿಲೇವಾರಿಯಲ್ಲಿ ಶೇ. 85.24% ರಷ್ಟು ಪ್ರಗತಿ ಸಾಧಿಸಲಾಗಿದೆಯೆಂದರು.

ಆಡಳಿತದಲ್ಲಿ ಇ–ಆಫೀಸ್ ಆನ್ಲೈನ್ ತಂತ್ರಾಂಶದಿಂದಾಗಿ ಪ್ರತಿನಿತ್ಯ ಕಚೇರಿಗೆ ಸ್ವೀಕೃತವಾಗುವ ಎಲ್ಲ ಪತ್ರಗಳನ್ನು ಇ–ಆಫೀಸ್ ಮೂಲಕವೇ ಸ್ವೀಕೃತಿ ಹಾಗೂ ವಿಲೇವಾರಿ ಮಾಡಲಾಗುತ್ತಿದೆ. ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿ ಕಚೇರಿ ಹಾಗೂ ಎಲ್ಲ ತಹಶೀಲದಾರ ಕಚೇರಿಗಳಲ್ಲಿ ಇ–ಆಫೀಸ್ ತಂತ್ರಾಂಶವನ್ನು ಕಡ್ಡಾಯವಾಗಿ ಅನುಗಣ್ಣನಗೊಳಿಸಲಾಗಿದೆ. ಈಗಾಗಲೇ ಈ ತಂತ್ರಾಂಶ ಬಂದಾಗಿನಿಂದ ಜಿಲ್ಲೆಯಲ್ಲಿ ಈ ಆಫೀಸ್ ತಂತ್ರಾಂಶದ ಮೂಲಕ ಅರ್ಜಿದಾರರಿಂದ ಅಥವಾ ಕಚೇರಿಗಳಿಂದ ಒಟ್ಟು 29,713 ಅರ್ಜಿ ವಿಲೇವಾರಿ ಮಾಡಲಾಗಿದೆ. ಇದರಿಂದಾಗಿ ಕಚೇರಿಯಲ್ಲಿನ ಕಡತಗಳನ್ನು ಪಾರದರ್ಶಕವಾಗಿ ಶೀಘ್ರ ವಿಲೇವಾರಿ ಮಾಡುವಲ್ಲಿ ಸಹಕಾರಿಯಾಗಿದೆ. ಇದರಿಂದಾಗಿ ಸಾರ್ವಜನಿಕರಿಗೂ ಸಹಿತ ತಮ್ಮ ಅರ್ಜಿಯ ಸ್ಥಿತಿಗತಿಯ ಬಗ್ಗೆ ತಿಳಿದುಕೊಳ್ಳಲು ಸಹಕಾರಿಯಾಗಿದೆ ಎಂದರು. ಕಳೆದ 6 ತಿಂಗಳಿಂದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ 27 ಸಾವಿರ ಕಡತಗಳನ್ನು ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಲಾಗಿರುತ್ತದೆ. ಅದರಂತೆ ಉಪವಿಭಾಗಾಧಿಕಾರಿಗಳ ಕಾರ್ಯಾಲಯದಿಂದ ಕಳೆದ 3 ತಿಂಗಳಿಂದ ಕಡತಗಳನ್ನು ವಿಲೇವಾರಿ ಮಾಡಿರುತ್ತದೆ. ಅದರಂತೆ ಜಿಲ್ಲೆಯ ಎಲ್ಲ 8 ತಹಶೀಲದಾರ ಕಾರ್ಯಾಲಯಗಳಲ್ಲಿ ಅರ್ಜಿಗಳನ್ನು ವಿಲೇವಾರಿ ಮಾಡಿ ಜಿಲ್ಲೆಯಲ್ಲಿ ಒಟ್ಟು 29,713 ಕಡತಗಳನ್ನು ವಿಲೇವಾರಿ ಮಾಡಿರುತ್ತದೆ ಎಂದರು.

ಜಿಲ್ಲೆಯಲ್ಲಿ ಕಳೆದ 6 ತಿಂಗಳ ಅವಧಿಯಲ್ಲಿ ಅಟಲ್ಜೀ ಜನಸ್ನೇಹಿ ಕೇಂದ್ರದ ಮುಖಾಂತರ 42 ಸೇವೆಗಳನ್ನು ಸಾರ್ವಜನಿಕರಿಗೆ ನೀಡಲಾಗುತ್ತಿದ್ದು, ಈ ಪೈಕಿ 22 ಸೇವೆಗಳಿಗೆ ಎಲ್ಲಾ ಹಂತಗಳಲ್ಲಿ ಅರ್ಜಿಯ ಸ್ಥಿತಿ–ಗತಿಯ ಕುರಿತು ಸಾರ್ವಜನಿಕರಿಗೆ ಎಸ್. ಎಂ.ಎಸ್. ಮೂಲಕ ಮಾಹಿತಿಯನ್ನು ನೀಡಲಾಗುತ್ತಿದೆ. ಸಾರ್ವಜನಿಕರಿಂದ ಸ್ವೀಕೃತವಾದ ಅರ್ಜಿಯ ವಿಲೇವಾರಿ ಮಾಹಿತಿ / ಪ್ರಮಾಣ ಪತ್ರಗಳನ್ನು ಪಿ.ಡಿ.ಎಫ್. ಮುಖಾಂತರ ಡೌನಲೋಡ ಮಾಡಿಕೊಳ್ಳುವ ವ್ಯವಸ್ಥೆಯನ್ನೂ ಸಹ ಮಾಡಲಾಗಿದೆಂದು ತಿಳಿಸಿದರು.

ಕಂದಾಯ ಸಚಿವರ ನಿರ್ದೇಶನದಂತೆ, ಜಿಲ್ಲೆಯಲ್ಲಿ ಪೈಕಿ ಪಹಣಿ ಪ್ರಕರಣಗಳನ್ನು ವಿಲೇವಾರಿ ಮಾಡುವಲ್ಲಿ 15 ದಿನಗಳ ವಿಶೇಷ ಅಭಿಯಾನದ ಮೂಲಕ ತ್ವರಿತ ವಿಲೇವಾರಿಗೆ ಕ್ರಮ ಕೈಕೊಳ್ಳಲಾಗಿದೆ. ಗೇಣಿ ಮತ್ತು ಪಹಣಿ ಪತ್ರಿಕೆಗಳ ಅಂಕಣ 3 ಹಾಗೂ 9 ರಲ್ಲಿನ ವ್ಯತ್ಯಾಸವನ್ನು ಸರಿಪಡಿಸುವ ಕಾರ್ಯವನ್ನು ತ್ವರಿತಗತಿಯಲ್ಲಿ ಕೈಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಸಾರ್ವಜನಿಕರಿಂದ ಯಾವುದೇ ಪೇಡಿ ಶುಲ್ಕ ಪಡೆಯದೇ ಕಳೆದ 6 ತಿಂಗಳ ಅವಧಿಯಲ್ಲಿ ಒಟ್ಟು 940 ಸರ್ವೇ ನಂಬರಗಳಿಗೆ ಸಂಬಂಧಿಸಿದಂತೆ 2469 ಹೊಸದಾಗಿ ಪಹಣಿಗಳನ್ನು ಸೃಜಿಸಲಾಗಿರುತ್ತದೆ. ಈ ಮೊದಲು ಒಂದು ವರ್ಷದಿಂದ ಆಗದೇ ಇರುವ ಕೆಲಸ ಈಗ ಬಹಳ ಕಡಿಮೆ ಅವಧಿಯಲ್ಲಿ ಆಗುತ್ತಿರುವದರಿಂದಾಗಿ ಸಾರ್ವಜನಿಕರೂ ಕೂಡಾ ಇದಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸುತ್ತಿದ್ದಾರೆ. ಜಿಲ್ಲೆಯಲ್ಲಿ ಹದ್ದುಬಸ್ತ ಅಳತೆ ಪ್ರಕರಣಗಳನ್ನು ದೀರ್ಘಾವಧಿಯ ಬದಲಾಗಿ 2 ತಿಂಗಳ ಅವಧಿಯಲ್ಲಿ ಲಭ್ಯ ಇರುವ ಭೂಮಾಪಕರಿಂದ ಇತ್ಯರ್ಥಪಡಿಸಲು ಕ್ರಮಕೈಕೊಳ್ಳಲಾಗಿದೆ. ಹಾಗೆಯೇ ಮೋಜಣಿ ತಂತ್ರಾಂಶದಲ್ಲಿ ಕಳೆದ 6 ತಿಂಗಳ ಅವಧಿಯಲ್ಲಿ ಒಟ್ಟು 13262 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿರುತ್ತದೆಯೆಂದರು.

## ಲೀಲಾವತಿ ಕೂಡ ನನಗೆ ತಾಯಿಯಂತೆ ಎಂದ್ರು ಶಿವಣ್ಣ: ಕಣ್ಣೀರಿಟ್ಟ ವಿನೋದ್ ರಾಜ್

ಬೆಂಗಳೂರು: ಕನ್ನಡ ಚಿತ್ರರಂಗದ ಮೇರುನಟ ಡಾ. ರಾಜ್ ಕುಮಾರ್ ಹಾಗೂ ನಟಿ ಲೀಲಾವತಿ ನಡುವಿನ ಸಂಬಂಧದ ಬಗ್ಗೆ ನಾನಾ ವರದಿಗಳು ಹರಿದಾಡಿದೆ. ರಾಜ್–ಲೀಲಾ ಮದುವೆ ಬಗ್ಗೆಯೂ ಊಹಾಪೋಹ ಹುಟ್ಟಿಕೊಂಡಿತ್ತು. ಆದೇನೆ ಕಂಟ್ರೋವರ್ಸಿ ಆದ್ರೂ ಡಾ.ರಾಜ್ ಕುಮಾರ್ ಕುಟುಂಬಸ್ಥರಾಗಲಿ ಅಥವಾ ಲೀಲಾವತಿ ಕುಟುಂಬವಾಗಲಿ ಈ ಬಗ್ಗೆ ಎಂದಿಗೂ ಮಾತಾಡಿಲ್ಲ.

ಲೀಲಾವತಿ ಕೂಡ ರಾಜ್ ಕುಮಾರ್ ಕುಟುಂಬ ಮೇಲೆ ಅಪಾರ ಗೌರವ ಹೊಂದಿದ್ರು. ದೊಡ್ಮನೆಯ ದೊಡ್ಡ ಜನ ಎಂದೆ ಕರೆಯುತ್ತಿದ್ರು. ಅನಾರೋಗ್ಯದಿಂದ ಹಾಸಿಗೆ ಹಿಡಿದ ಈ ಹಿರಿಜೀವವನ್ನು ನೋಡಲು ಡಾ. ರಾಜ್ ಕುಮಾರ್ ಹಿರಿಯ ಪುತ್ರ ಶಿವರಾಜ್ ಕುಮಾರ್ ಲೀಲಾವತಿ ಮನೆಗೆ ಭೇಟಿ ನೀಡಿದ್ರು. ಈ ವೇಳೆ ಶಿವಣ್ಣ ಆಡಿದ ಒಂದೊಂದು ಮಾತು ಕೂಡ ರಾಜ್ ನೆನಪು ಕಾಡುವಂತೆ ಮಾಡಿದೆ.

**ಲೀಲಾವತಿ ಕೂಡ ನನಗೆ ತಾಯಿಯಂತೆ**

ಹಲವು ವರ್ಷಗಳ ಹಿಂದೆ ನಟಿ ಲೀಲಾವತಿ ಅವರು ಪಾರ್ವತಮ್ಮ ಮೇಲೆ ನನಗೆ ಯಾವುದೇ ದ್ವೇಷವಿಲ್ಲ



ಎಂದು ಹೇಳಿದ್ರು. ಇಂದು ಪಾರ್ವತಮ್ಮ ಪುತ್ರ ಶಿವಣ್ಣ ಲೀಲಾವತಿ ಕೂಡ ನನಗೆ ಅಮ್ಮನಂತೆ ಎಂದಿದ್ದಾರೆ. ವಿನೋದ್ ನೋಡಿದ್ರ ನನ್ನ ತಾಯಿ ನೋಡಿದ ಹಾಗೇ ಆಗುತ್ತೆ ಎಂದು ಶಿವಣ್ಣ ಹೇಳುತ್ತಿದ್ದಂತೆ ಪಕ್ಕದಲ್ಲೇ ಇದ್ದ ವಿನೋದ್ ರಾಜ್ ಭಾವುಕರಾದ್ರು.

**ಕಣ್ಣೀರಿಟ್ಟ ವಿನೋದ್ ರಾಜ್ ಕೈ ಹಿಡಿದ ಶಿವಣ್ಣ**

ಹಿರಿಯ ನಟಿ ಲೀಲಾವತಿ ಆರೋಗ್ಯ ವಿಚಾರಸಲು ಪತ್ನಿ ಗೀತಾ ಶಿವರಾಜ್ಕುಮಾರ್ ಜೊತೆಗೆ ಬಂದಿದ್ದ ಶಿವಣ್ಣ, ಲೀಲಾವತಿ ಹಾಗೂ ವಿನೋದ್ ಬಗ್ಗೆ ಪ್ರೀತಿಯ ಮಾತುಗಳಾಗಿದ್ದಾರೆ. ನನ್ನ ವಿನೋದ್ ಎಂದು ಕೈಹಿಡಿದು ಸಮಾಧಾನ ಮಾಡಿ ಧೈರ್ಯ ತುಂಬಿದ್ದಾರೆ.

## "ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ"ಯಡಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ(ಕಒಏಖಙ) ಪ್ರತಿ ಹನಿಗೆ ಅಧಿಕ ಬೆಳೆ (ಸೂಕ್ಷ್ಮ ನೀರಾವರಿ) ಕಾರ್ಯಕ್ರಮದಡಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸುವ ಎಲ್ಲಾ ವರ್ಗದ ರೈತರಿಗೆ ಗರಿಷ್ಠ 5 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುವುದು ಹಾಗೂ ತರಕಾರಿ ಮತ್ತು ಹೂ ಬೆಳೆಗಳಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶಕ್ಕೆ ಸಹಾಯಧನ ನೀಡಲಾಗುವುದು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಶೇ. 90 ರಷ್ಟು ಸಹಾಯಧನ ನೀಡಲು ಅವಕಾಶವಿರುತ್ತದೆ ಹಾಗೂ ಇತರೆ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಶೇ. 75 ರಷ್ಟು ಸಹಾಯಧನ ನೀಡಲು ಅವಕಾಶವಿರುತ್ತದೆ.

2 ಹೆಕ್ಟೇರ್ ಮೇಲ್ಪಟ್ಟು 5 ಹೆಕ್ಟೇರ್ ವರೆಗೂ ಶೇ. 45 ರಷ್ಟು ಸಹಾಯಧನ ನೀಡಲು ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆದ್ದರಿಂದ ಅರ್ಹ ರೈತರು ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ತೋಟಗಾರಿಕೆ ಕಛೇರಿಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು ಖಾನಾಪೂರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಸಕ್ತ ಹಂಗಾಮಿನಲ್ಲಿ 3 ಲಕ್ಷ ಮೆ.ಟನ್ ಕಬ್ಬು ನುರಿಸುವ ಗುರಿ: ಶಾಸಕ ಬಾಲಚಂದ್ರ ಜಾರಕಿಹೊಳಿ

ಘಟಪ್ರಭಾ: ಈ ಭಾಗದ ರೈತರ ಜೀವನಾಡಿಯಾಗಿರುವ ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯು ಪ್ರಸಕ್ತ ಕಬ್ಬು ನುರಿಸುವ ಹಂಗಾಮಿನಲ್ಲಿ 3 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿಯನ್ನು ಹೊಂದಿದ್ದೇವೆ ಎಂದು ಕಾರ್ಖಾನೆಯ ಮಾರ್ಗದರ್ಶಕರೂ ಆಗಿರುವ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಕಾರ್ಮಿಕರ ಸತ್ಕಾರ ಸ್ವೀಕರಿಸಿ ಮಾತನಾಡದ ಅವರು, ರೈತರು ಉತ್ತಮ ಇಳುವರಿಯ ಕಬ್ಬನ್ನು ನಮ್ಮ ಕಾರ್ಖಾನೆಗೆ ಪೂರೈಸುವ ಮೂಲಕ ಕಾರ್ಖಾನೆಯ ಪ್ರಗತಿಗೆ ಕೈಜೋಡಿಸುವಂತೆ ರೈತರನ್ನು ಕೋರಿಕೊಂಡರು.

ಈ ಬಾರಿ ಮಳೆ ಕೈಕೊಟ್ಟಿದ್ದರಿಂದ ನಿರೀಕ್ಷಿಸಿದ ಪ್ರಮಾಣದಷ್ಟು ಕಬ್ಬು ಬೆಳೆದಿರುವುದಿಲ್ಲ.



ಆದಾಗ್ಯೂ ಪ್ರತಿ ವರ್ಷದಂತೆ ಈ ವರ್ಷವೂ ನಮ್ಮ ರೈತ ಸಮೂಹ ತಮ್ಮ ಕಬ್ಬನ್ನು ನಮ್ಮ ಕಾರ್ಖಾನೆಗೆ ಪೂರೈಕೆ ಮಾಡಬೇಕು. ಜೊತೆಗೆ ಪ್ರಸಕ್ತ ಹಂಗಾಮಿನಲ್ಲಿ ಕಬ್ಬು ಪೂರೈಸುತ್ತಿರುವ ರೈತರಿಗೆ ಪ್ರತಿ ಟನ್ ಕಬ್ಬಿಗೆ 3000 ರೂ. ನೀಡಲು ತೀರ್ಮಾಣ ತೆಗೆದುಕೊಳ್ಳಲಾಗಿದೆ. ಇದೇ ನವ್ಹೆಂಬರ್ 20 ರವರೆಗೆ ಕಬ್ಬನ್ನು ಪೂರೈಸಿದ ರೈತರಿಗೆ ಈಗಾಗಲೇ ಬಿಲ್ಲನ್ನು ಸಂದಾಯ ಮಾಡಲಾಗಿದೆ. ಆದ್ದರಿಂದ ಹೆಚ್ಚಿನ ಪ್ರಮಾಣದಲ್ಲಿ ಕಬ್ಬನ್ನು ಪೂರೈಸುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮನವಿ ಮಾಡಿಕೊಂಡಿದ್ದಾರೆ.

ಕಾರ್ಮಿಕರಿಗೆ ದೀಪಾವಳಿ ಬಂಪರ್ : ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಶೇ 13 ರಷ್ಟು ಬೋನಸ್ ನೀಡಲಾಗಿದೆ.

ಇದರ ಜೊತೆಗೆ ಅವರ ವೇತನವನ್ನು ಶೇ 10 ರಷ್ಟು ಹೆಚ್ಚಿಸಲಾಗಿದೆ. ಕಾರ್ಖಾನೆಯ ಅಭಿವೃದ್ಧಿಯಲ್ಲಿಯೂ ಕಾರ್ಮಿಕರು ಮತ್ತು ಸಿಬ್ಬಂದಿಗಳ ಪಾತ್ರವೂ ಕೂಡ ಅಷ್ಟೇ ಮುಖ್ಯವಾಗಿದೆ ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಕಾರ್ಖಾನೆಯ ಕಾರ್ಮಿಕರು ಸತ್ಕರಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿ ಸದಸ್ಯರು, ಕಾರ್ಖಾನೆಯ ಸಿಇಓ ನಿತೀನ ಪಾಟೀಲ, ಲೆಕ್ಕ ಪರಿಶೋಧಕ ಸೈದಪ್ಪ ಗದಾಡಿ, ಮುಖಂಡ ಅಮೂಲ ನಾಯಿಕ, ಕಛೇರಿಯ ಅಧೀಕ್ಷಕ ಈರಣ್ಣ ಜಂಬಗಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಅಜ್ಜನ ಅಂತ್ಯಕ್ರಿಯೆಗೆ ಬರುತ್ತಿದ್ದ ಮೊಮ್ಮಗ ಅಪಘಾತದಲ್ಲಿ ಸಾವು

ಕುಂದಾಪುರ: ಇಲ್ಲಿನ ಶೇಡಿಮನೆ ಗ್ರಾಮದ ಪಾಟ್ಲಮಕ್ಕಿಯಲ್ಲಿನ ನಾರಾಯಣ ಪೂಜಾರಿ (70) ಅವರು ಮೃತಪಟ್ಟ ಸುದ್ದಿ ಕೇಳಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಬೈಕಿನಲ್ಲಿ ಆಗಮಿಸುತ್ತಿದ್ದ ಮೊಮ್ಮಗ ಅಪಘಾತದಲ್ಲಿ ಮೃತಪಟ್ಟ ಘಟನೆ ಸೋಮವಾರ ಸಂಭವಿಸಿದೆ.



ಮಾನಂಜೆ ವ್ಯವಸಾಯ ಸೇವಾ ಸಹಕಾರಿ ಸಂಘದ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್, ಆಜ್ರಿ ಗ್ರಾಮದ ಚೌಕುಳಮಕ್ಕಿ ನಿವಾಸಿ ಚೆನ್ನ ಪೂಜಾರಿ ಹಾಗೂ ಇಂದಿರಾ ಅವರ ಏಕೈಕ ಪುತ್ರ ನಿತೀಶ್ ಪೂಜಾರಿ (20) ಮೃತ ಯುವಕ.

ಚಾಮರಾಜನಗರದ ಸರಕಾರಿ ವೈದ್ಯಕೀಯ ಕಾಲೇಜಿನಲ್ಲಿ 2ನೆ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದು ತಾಯಿ ಮನೆಯಲ್ಲಿ ಅಜ್ಜ ಮೃತಪಟ್ಟ ಸುದ್ದಿ ಕೇಳಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಆಗಮಿಸುವುದಾಗಿ ಹೇಳಿದ್ದ.

ಅವಸರದಲ್ಲಿ ಊರಿಗೆ ಬರುವುದು ಬೇಡ ಎಂದು ಮನೆಯವರು ಹೇಳಿದ್ದರೂ ಎತ್ತಿ ಆಡಿಸಿದ ಅಜ್ಜನ ಮೇಲಿನ ಮೋಹದಿಂದ ತನ್ನ ಬೈಕಿನಲ್ಲಿ ಕುಂದಾಪುರಕ್ಕೆ ಹೊರಟಿದ್ದರು.

ಈ ಸಂದರ್ಭ ಚಾಮರಾಜನಗರ ತಾಲೂಕಿನ ಪಣ್ಯದಹಂಡಿ ಬಳಿ ರಸ್ತೆ ಮಧ್ಯದ ಹಂಪ್ ಅನ್ನು ಗಮನಿಸದೇ ಅಕಸ್ಮಾತ್ತಾಗಿ ರಸ್ತೆಗೆ ಬಿದ್ದು ಮೃತಪಟ್ಟಿದ್ದರು. ಚಾಮರಾಜನಗರ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಲು ಜಾರಿ ಬಾವಿಗೆ ಬಿದ್ದು ಆಶಾಕಾರ್ಯಕರ್ತೆ ಸಾವು



ಮಧುಗಿರಿ/ಕೊರಟಗೆರೆ: ಎಮ್ಮೆ ಮೇಯಿಸುವ ವೇಳೆ ಆಶಾಕಾರ್ಯಕರ್ತೆ ಯೊಬ್ಬರು ಕಾಲು ಜಾರಿ ಬಾವಿಗೆ ಬಿದ್ದ ಮೃತಪಟ್ಟಿರುವ ಘಟನೆ ಕೊಡಿಗೇನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಮಧುಗಿರಿ ತಾಲ್ಲೂಕಿನ ಗಾಲಿಹಳ್ಳಿಯ ವಾಸಿ ಸುನಂದಮ್ಮ (40) ಮೃತ ದುರ್ದೈವಿ. ಸುನಂದಮ್ಮ ಎಮ್ಮೆ ಮೇಯಿಸುತಿದ್ದಾಗ ಎಮ್ಮೆ ರಭಸವಾಗಿ ಹಗ್ಗ ಎಳೆದಿದ್ದುರಿಂದ ನಿಯಂತ್ರಣ ತಪ್ಪಿ ಬಾವಿಗೆ ಬಿದ್ದು ಮೃತಪಟ್ಟಿದ್ದಾರೆ.

ಸುನಂದಮ್ಮ ಗಾಲಿಹಳ್ಳಿಯ ಆಶಾ ಕಾರ್ಯಕರ್ತೆಯಾಗಿದ್ದು, ಇಬ್ಬರು ಗಂಡು ಮಕ್ಕಳಿದ್ದಾರೆ. ಸ್ಥಳಕ್ಕೆ ಆರೋಗ್ಯ ಇಲಾಖೆ ಸಿಬ್ಬಂದಿಗಳು ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದ್ದಾರೆ.

ಸುದ್ದಿ ತಿಳಿದು ಸ್ಥಳಕ್ಕೆ ಕೊಡಿಗೇನಹಳ್ಳಿ ಪಿಎಸ್ಐ ಶ್ರೀನಿವಾಸ್ ಪ್ರಸಾಸ್, ಸಿಬ್ಬಂದಿಗಳಾದ ಜಯರಾಂ, ಮಂಜುನಾಥ್ ಭೇಟಿ ನೀಡಿ ಅಗ್ನಿಶಾಮಕ ಇಲಾಖೆಯ ಸಹಕಾರದಿಂದ ಶವವನ್ನು ಮೇಲೆತ್ತಿ ಮಧುಗಿರಿ ಶವಗಾರಕ್ಕೆ ರವಾನಿಸಿದ್ದಾರೆ. ಈ ಸಂಬಂಧ ಕೊಡಿಗೇನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮಕ್ಕೆ ಚಾಲನೆ

ಧಾರವಾಡ: ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮ ಮೂಲಕ ರಾಜ್ಯದಲ್ಲಿ ಮಕ್ಕಳು ಮತ್ತು ಗರ್ಭಿಣಿ ಮಹಿಳೆಯರು ಅನೀಮಿಯಾದಿಂದ ಬಳಲುತ್ತಿರುವುದನ್ನು ತಡೆಗಟ್ಟುವುದು ಮುಖ್ಯ ಉದ್ದೇಶವಾಗಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ ಅವರು ಹೇಳಿದರು.

ಬೆಳಿಗ್ಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಂಟುಂಬ ಕಲ್ಯಾಣ ಇಲಾಖೆ, ತಾಲೂಕಾ ಅರೋಗ್ಯಾಧಿಕಾರಿಗಳ ಕಚೇರಿ ಹಾಗೂ ಜೆ.ಎಸ್.ಎಸ್ ಹುಕ್ಕೇರಿಕರ್ ಪಿಯುಸಿ ಕಾಲೇಜಿನ ಸಹಯೋಗದಲ್ಲಿ ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ರಾಜ್ಯದಲ್ಲಿ ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮವು ನವೆಂಬರ್ 22, 2023 ರಿಂದ ಅನುಗಣ್ಣನಗೊಂಡಿದ್ದು, ಉತ್ತಮ ಆಹಾರ ಸೇವನೆ ಮಾಡಿ, ಅನೀಮಿಯಾ ದಿಂದ ದೂರವಿರಬೇಕು.

ಅನೀಮಿಯಾ ಹೆಚ್ಚಾದಂತೆ ಮಕ್ಕಳು ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ. ಆದ್ದರಿಂದ ಸರ್ಕಾರವು ಪರೀಕ್ಷೆ–ಚಿಕಿತ್ಸೆ ಉಚಿತ, ಅನೀಮಿಯಾ ಮುಕ್ತ ಖಚಿತ ಎಂಬ ಘೋಷವಾಕ್ಯದೊಂದಿಗೆ ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ



ಕಾರ್ಯಕ್ರಮವನ್ನು ಅನುಗಣ್ಣನಗೊಳಿಸಿದೆ ಎಂದರು.

ಗರ್ಭಿಣಿ ಮಹಿಳೆಯರು ಎಲ್ಲ ಸರ್ಕಾರಿ ಮತ್ತು ಅನುದಾನಿತ ಶಾಲೆಗಳು, ಅಂಗನವಾಡಿ ಕೇಂದ್ರಗಳು ಮತ್ತು ಸರ್ಕಾರಿ, ಅನುದಾನಿತ ಪಿಯು ಕಾಲೇಜುಗಳ ಮಕ್ಕಳ ಆರೋಗ್ಯ ತಪಾಸಣೆ ಮತ್ತು ಎಚ್.ಬಿ ಲೆವೆಲ್ ಪರೀಕ್ಷಿಸಲಾಗುತ್ತದೆ. ಅನೀಮಿಯಾದಿಂದ ಬಳಲುತ್ತಿರುವ ಮಕ್ಕಳಿದ್ದಲ್ಲಿ ಅವರಿಗೆ ಸೂಕ್ತ ಚಿಕಿತ್ಸೆ ನೀಡಿ ಗುಣಮುಖರನ್ನಾಗಿ ಮಾಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಇದರ ಸದುಪಯೋಗ ಪಡೆದುಕೊಂಡು ಉಚಿತ ಪರೀಕ್ಷೆ ಮಾಡಿಸಿಕೊಂಡು, ಅಗತ್ಯವಿದ್ದಲ್ಲಿ ಚಿಕಿತ್ಸೆ ಪಡೆಯಬೇಕು ಎಂದು ಅವರು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶಶಿ ಪಾಟೀಲ ಅವರು ಮಾತನಾಡಿ, ಅನೀಮಿಯಾ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮವು ಸದೃಢ ಭಾರತ ನಿರ್ಮಾಣದಲ್ಲಿ ಬಹು ಮುಖ್ಯ ಪಾತ್ರ ನಿರ್ವಹಿಸುತ್ತದೆ. ಸರಕಾರದ ಆದೇಶದಂತೆ ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳು, ಸರ್ಕಾರಿ ಮತ್ತು ಅನುದಾನಿತ ಶಾಲೆಗಳು, ಪಿಯು ಕಾಲೇಜುಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆ ಮತ್ತು ಎಚ್.ಬಿ. ಲೆವೆಲ್ ಪರೀಕ್ಷೆ ಮಾಡಲಾಗುತ್ತದೆ. ಮಕ್ಕಳು ಅನೀಮಿಯಾದಿಂದ ಬಳಲುತ್ತಿದ್ದಲ್ಲಿ, ಅವರಿಗೆ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದು ಹೇಳಿದರು.

ಜಿಲ್ಲಾ ಆರ್ಸಿ.ಹೆಚ್.ಓ. ಅಧಿಕಾರಿ ಡಾ. ಸುಜಾತಾ ಹಸವಿಮಠ ಅವರು ಮಾತನಾಡಿ, ಮೊದಲ ಹಂತದಲ್ಲಿ ಜಿಲ್ಲೆಯ ಸರಕಾರಿ, ಅನುದಾನಿತ ಪಿಯು ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಆರೋಗ್ಯ ಇಲಾಖೆಯ ಎಲ್ಲ ಆರ್ಬಿ.ಎಸ್.ಕೆ ತಂಡಗಳು ನವೆಂಬರ್ 22 ರಿಂದ 28 ರವರೆಗೆ ಜಿಲ್ಲೆಯ ಸರ್ಕಾರಿ ಮತ್ತು ಅನುದಾನಿತ 90 ಕಾಲೇಜುಗಳಲ್ಲಿ ಉಚಿತ ತಪಾಸಣೆ ಕೈಗೊಂಡು 10,524 ವಿದ್ಯಾರ್ಥಿಗಳನ್ನು ತಪಾಸಣೆಗೆ ಒಳಪಡಿಸಿವೆ. ಜಿಲ್ಲೆಯಲ್ಲಿ ಅಂದಾಜು 168 ಸರಕಾರಿ ಮತ6ತು ಅನುದಾನಿತ ಪಿಯು ಕಾಲೇಜುಗಳಲ್ಲಿ 27,000 ವಿದ್ಯಾರ್ಥಿಗಳಿದ್ದಾರೆ ಎಂದು ಅವರು ತಿಳಿಸಿದರು.

ಕಾಲೇಜು ವಿದ್ಯಾರ್ಥಿಗಳ ತಪಾಸಣೆ ಪೂರ್ಣಗೊಂಡ ತಕ್ಷಣ ಪ್ರಾಥಮಿಕ,ಪ್ರೌಢ ಮತ್ತು ಅಂಗನವಾಡಿ ಕೇಂದ್ರಗಳ ಮಕ್ಕಳ ತಪಾಸಣೆ ಮಾಡಲಾಗುತ್ತದೆ. ಈ ಕಾರ್ಯಕ್ರಮ ನಿರಂತರವಾಗಿ ಮುಂದುವರಿಯುತ್ತದೆ ಎಂದು ಅವರು ಹೇಳಿದರು

ಕಾರ್ಯಕ್ರಮದಲ್ಲಿ ಜೆ.ಎಸ್.ಎಸ್. ಹುಕ್ಕೇರಿಕರ್ ಪಿ.ಯು ಕಾಲೇಜಿನ ಪ್ರಾಂಶುಪಾಲರಾದ ಭಾರತಿ ಶಾನಭಾಗ, ತಾಲೂಕಾ ಆರೋಗ್ಯಾಧಿಕಾರಿ ಡಾ.ತನುಜಾ ಕೆ.ಎನ್, ಮದಾರಮಡ್ಡಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಅರುಣಾ ಅಸ್ಪೀಕರ್ ಅವರು ಉಪಸ್ಥಿತರಿದ್ದರು. ಕವಿತಾ ಗಾರ್ಗಿ ಕಾರ್ಯಕ್ರಮ ನಿರೂಪಿಸಿದರು. ಆರ್ಬಿ.ಎಸ್.ಕೆ ತಂಡದ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಇತಿಹಾಸ ರಚನೆಯಲ್ಲಿ ನಾಣ್ಯಗಳ ಪಾತ್ರ ಮುಖ್ಯ: ಮಡಿವಾಳ ರಾಜಯೋಗೀಂದ್ರ ಶ್ರೀ

ಚನ್ನಮ್ಮ ಕಿತ್ತೂರು: ಇತಿಹಾಸ ರಚನೆಯಲ್ಲಿ ನಾಣ್ಯಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ರಾಜಗುರು ಸಂಸ್ಥಾನ ಕಲ್ಮಠದ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿ ಹೇಳಿದರು.

ಪಟ್ಟಣದ ಗುರುಭವನದಲ್ಲಿ ಶನಿವಾರ ಪರಂಪರೆ ಮತ್ತು ಪ್ರಾಚ್ಯ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆಯು ಆಯೋಜಿಸಿದ್ದ ರಾಷ್ಟ್ರಮಟ್ಟದ ನಾಣ್ಯ ಪ್ರದರ್ಶನವನ್ನು ಅವರು ಉದ್ಘಾಟಿಸಿದರು. ಕ್ಯುರೇಟರ್ ರಾಘವೇಂದ್ರ ಪ್ರಾಸ್ತಾವಿಕ ಮಾತನಾಡಿ, ನಾಣ್ಯಗಳು ಐತಿಹಾಸಿಕ ಮೂಲಾಧಾರಗಳಲ್ಲಿ ಪ್ರಮುಖ ಆಧಾರಗಳಾಗಿದ್ದರೆ, ಇತಿಹಾಸಕಾರರು ಅವರಿಗೆ ಅಗತ್ಯ ದಾಖಲೆಯಾಗಿ ಬಳಸಿ ಇತಿಹಾಸ ಕಟ್ಟುತ್ತಾರೆ. ನಾಣ್ಯ ಪ್ರದರ್ಶನ ಅತ್ಯಂತ ಶ್ರಮದಾಯಕ ಕಾರ್ಯ ಎಂದರು.

ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಸ್. ಬಿ.ದಳವಾಯಿ, ಪ್ರಾಚಾರ್ಯ ಜಿ.ಎಂ. ಗಣಾಚಾರಿ ಕಾರ್ಯ.

ಶಾಸಕ ಬಾಬಾಸಾಹೇಬ ಪಾಟೀಲ ಅವರು ನಾಣ್ಯಗಳನ್ನು ವೀಕ್ಷಿಸಿ, ಅಂದಿನ ಸಂಸ್ಕೃತಿ ಹಾಗೂ ಆರ್ಥಿಕ ವ್ಯವಸ್ಥೆ



ಸಂಕೇತಿಸುತ್ತವೆ.

ನಾಣ್ಯಗಳನ್ನು ಪ್ರದರ್ಶಿಸಿದ ವಿದ್ವಾಂಸರಾದ ಭರತಕುಮಾರ ಆಲೂರು, ವಿವೇಕ ಶ್ರೀಪಾದ ಬೋರಕರ ಅವರನ್ನು ಸನ್ಮಾನಿಸಲಾಯಿತು. ಸುಮಾರು 500 ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು, ಶಿಕ್ಷಕರು ಇದ್ದರು. ಮಹೇಶ ಚನ್ನಂಗಿ, ಬಿ.ಸಿ.ಬಿದರಿ, ಮಂಜುನಾಥ ಕಳಸಣ್ಣವರ, ರಾಜಶೇಖರ ರಗಟಿ, ಮಹೇಶ್ವರ ಹೊಂಗಲ ಇತರರು ಇದ್ದರು.

## ಅಂಚೆ ಜೀವ ವಿಮೆ ಪ್ರತಿನಿಧಿಗಳ ಆಯ್ಕೆಗೆ ಸಂದರ್ಶನ

ಧಾರವಾಡ: ಹಿರಿಯ ಅಂಚೆ ಅಧೀಕ್ಷಕರ ಕಚೇರಿ, ಧಾರವಾಡ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಸಂದರ್ಶನ ಕರೆಯಲಾಗಿದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಡಿಸೆಂಬರ್ 11, 2023 ರಂದು ಬೆಳಗ್ಗೆ 11 ಗಂಟೆಗೆ ಧಾರವಾಡ ಕೆ.ಸಿ. ಪಾರ್ಕ್ ಹತ್ತಿರ ಇರುವ ಹಿರಿಯ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬೇಕು.

ಅಭ್ಯರ್ಥಿಗಳು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿದ್ದು, ಕಡ್ಡಾಯವಾಗಿ 18 ವರ್ಷಕ್ಕಿಂತ ಮೇಲ್ಪಟ್ಟವರಾಗಿರಬೇಕು. ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ರೂ.5,000/– ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ (NSC) ಅಥವಾ ಕಿಸಾನ ವಿಕಾಸ ಪತ್ರ (KVP) ರೂಪದಲ್ಲಿ ಭದ್ರತಾ ಠೇವಣಿಯನ್ನು ಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮೀಶನ ನೀಡಲಾಗುವುದು. ನಿಗದಿತ ವೇತನವು ಇರುವುದಿಲ್ಲ. ಅಭ್ಯರ್ಥಿಗಳು ಬೇರೆ ಯಾವುದೇ ಜೀವ ವಿಮಾ ಕಂಪನಿ, ಸಂಸ್ಥೆ, ಸಂಘಗಳ ಏಜೆಂಟ್ ಆಗಿರಬಾರದು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಅಂಚೆ ಅಧೀಕ್ಷಕರು, ಧಾರವಾಡ ವಿಭಾಗ–580008. ಹತ್ತಿರದ ಅಂಚೆ–ಕಚೇರಿಯನ್ನು ಸಂಪರ್ಕಿಸಬಹುದೆಂದು ಹಿರಿಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೆಕ್ಕಪರಿಶೋಧಕರ ನೇಮಕಾತಿ ಮಾಹಿತಿ ಸಲ್ಲಿಸಲು ಸೂಚನೆ

ಧಾರವಾಡ: ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು ವಾರ್ಷಿಕ ಮಹಾ ಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆ ಜರುಗಿದ ದಿನಾಂಕದಿಂದ 7 ದಿನಗಳೊಳಗಾಗಿ ಲೆಕ್ಕಪರಿಶೋಧಕರಿಗೆ, ಲೆಕ್ಕಪರಿಶೋಧನಾ ಫರ್ಮಗಳಿಗೆ ಮತ್ತು ಸಹಕಾರಿ ಲೆಕ್ಕಪರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ.

ಈವರೆಗೆ ಈ ಮಾಹಿತಿಯನ್ನು ಸಲ್ಲಿಸದ ಸಹಕಾರ ಸಂಘಗಳು ಈ ಪ್ರಕಟಣೆಯು ಪ್ರಕಟವಾದ 7 ದಿನಗಳೊಳಗಾಗಿ ವಾರ್ಷಿಕ ಮಹಾ ಸಭೆಯಲ್ಲಿ ಲೆಕ್ಕಪರಿಶೋಧಕರನ್ನು ಲೆಕ್ಕಪರಿಶೋಧನಾ ಫರ್ಮನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಸಂಘದ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಅಧ್ಯಕ್ಷರ ರುಜುವಿನೊಂದಿಗೆ ವಾರ್ಷಿಕ ಮಹಾಸಭೆಯ ನಡುವಳಿಯ ಪ್ರತಿಯನ್ನು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರ ಕಚೇರಿ, ಧಾರವಾಡ ಜಿಲ್ಲೆ ಧಾರವಾಡ, "ಶ್ರೀ ರೇಣುಕಾ ಕೃಪಾ" ಲೈನ್ಬಜಾರ, ಶ್ರೀ ಮಾರುತಿ ದೇವಸ್ಥಾನದ ಹತ್ತಿರ, ಕೆಂಪಗೇರಿ,

ಧಾರವಾಡ – 580001 ಗೆ ಸಲ್ಲಿಸಬೇಕು. ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ: 0836–2447331, 9380115309 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಸಹಕಾರ ಸಂಘಗಳ ಲೆಕ್ಕಪರಿಶೋಧನೆ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಏಡ್ಸ್ ದಿನ

ಬೆಳಗಾವಿ: ಅಂಗನವಾಡಿ ಪ್ರತಿ ವರ್ಷದಂತೆ ಈ ವರ್ಷವೂ "ವಿಶ್ವ ಏಡ್ಸ್ ದಿನದ ಪ್ರಯುಕ್ತ ಡಿಸೆಂಬರ್ 1, 2023 ರಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಆವರಣದಿಂದ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬಿಮ್ಸ್) ಬೆಳಗಾವಿ ಅಡಿಟೋರಿಯಂ ಸಭಾಂಗಣದವರೆಗೆ ಜಾಥಾ ಹಾಗೂ ಬೆಳಿಗ್ಗೆ 10 ಗಂಟೆಗೆ 06.30 ಗಂಟೆಗೆ ಕನ್ನಡ ಸಾಹಿತ್ಯ ಭವನದಿಂದ ಚನ್ನಮ್ಮಾ ಸರ್ಕಲ್ವರೆಗೆ ಕ್ಯಾಂಡಲ ಡೇ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಏಡ್ಸ್ ನಿರೋಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ವಿಶ್ವ ವಿಕಲಚೇತನರ ದಿನಾಚರಣೆ"-2023

## ತಾಯಿ ಸ್ಥಾನದಲ್ಲಿ ನಿಂತು ನಿಮ್ಮೆಲ್ಲ ಬೇಡಿಕೆ ಈಡೇರಿಸುತ್ತೇನೆ: ಲಕ್ಷ್ಮೀ ಹೆಬ್ಬಾಳಕರ

ಬೆಳಗಾವಿ: ಕ್ರೀಡಾಕೂಟವನ್ನು ಇಲಾಖೆಯ ಸಚಿವರಾಗಿರುವ ಲಕ್ಷ್ಮೀ ಹೆಬ್ಬಾಳ್ಕರ ಅವರು ದ್ವಜಾರೋಹನ ಮತ್ತು ಕ್ರೀಡಾಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಸರ್ಕಾರದಿಂದ ವಿಕಲಚೇತನರಿಗೆ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

"ವಿಶ್ವ ವಿಕಲಚೇತನರ ದಿನಾಚರಣೆ"-2023 ಪ್ರಯುಕ್ತ ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟವನ್ನು ನವ್ಹೆಂಬರ್ 29, 2023 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಕ್ರೀಡಾಂಗಣ ನೆಹರು ನಗರ, ಬೆಳಗಾವಿ ಇಲ್ಲಿ ಹಮ್ಮಿಕೊಳ್ಳಲಾಯಿತು.

ವಿಕಲಚೇತನರಿಗೆ ಮತ್ತು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಮತ್ತು ವಿಶೇಷ ಶಾಲೆಗಳ ಶಿಕ್ಷಕರಿಗೆ ತಾಯಿ ಸ್ಥಾನದಲ್ಲಿ ನಿಂತು ನಿಮ್ಮೆಲ್ಲ ಬೇಡಿಕೆ ಈಡೇರಿಸುತ್ತೇನೆ ಎಂದು ಹೇಳಿದರು. ಇಲಾಖೆಯ ಅಧಿಕಾರಿಗಳಿಗೆ




ವಿಕಲಚೇತನರಿಗೆ ಸಂಬಂಧಪಟ್ಟಂತ ಯಾವುದೇ ಕಡತಗಳನ್ನು ವಿಳಂಬಕ್ಕೆ ಅವಕಾಶ ನೀಡದೇ ತುರ್ತಾಗಿ ವಿಲೆ ಮಾಡಲಾಗುವುದು ಎಂದರು. ಸರ್ಕಾರದ ಹಂತದಲ್ಲಿ ಬಗೆಹರಿಸಬೇಕಾದಲ್ಲಿ ನನ್ನ ಗಮನಕ್ಕೆ ತಂದು ತುರ್ತಾಗಿ ವಿಲೇ ಮಾಡಿಕೊಡುವುದಾಗಿ ಭರವಸೆ ನೀಡಿದರು.

ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆಯ ಶ್ರೀನಿವಾಸ, ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ನಾಗಾರಜ್ ಆರ್ ಕಾರ್ಯಕ್ರಮದ ಅತಿಥಿಗಳಾಗಿ ಭಾಗವಹಿಸಿದ್ದರು. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ನಾಮದೇವ ಬಿಲ್ಕರ್ ಅವರು ಸ್ವಾಗತಿಸಿದರು.

ಜಿಲ್ಲೆಯ ವಿಶೇಷ ಶಾಲೆಗಳಾದ ಕಿವುಡ ಮಕ್ಕಳ ಸರ್ಕಾರಿ ಶಾಲೆ, ಮಾಹೇಶ್ವರಿ ಅಂಧ ಮಕ್ಕಳ ಶಾಲೆ, ಆರಾಧನಾ ಬುದ್ಧಿಮಾಂಧ್ಯ ಮಕ್ಕಳ ಶಾಲೆ, ಶ್ರೀ ರೇಣುಕಾ ಕೃಪ ಬುದ್ಧಿಮಾಂದ್ಯ ಮಕ್ಕಳ ಶಾಲೆ ಸವದತ್ತಿ, ಶ್ರೀ ವಿ. ಪಿ. ಜೇವೂರ ಸ್ಮಾರಕ ಕಿವುಡ ಮಕ್ಕಳ ಶಾಲೆ ಮುನವಳ್ಳಿ, ಶ್ರೀ ದೂದನಾನಾ ಬುದ್ಧಿಮಾಂಧ್ಯ ಮಕ್ಕಳ ಶಾಲೆ ಹಿಡಕಲ್‌ಡ್ಯಾಂ, ಕಾರ್ಮೆಲ್ ಬುದ್ಧಿಮಾಂದ್ಯ ಮಕ್ಕಳ ಶಾಲೆ ಬೈಲಹೊಂಗಲ, ಬರ್ಡ್ಸ್ ಕಿವುಡ ಮಕ್ಕಳ ಶಾಲೆ ತುಕ್ಕಾನಟ್ಟಿ, ಶ್ರೀ ನಿತಿನಕುಮಾರ ಕದಂ ಕಿವುಡ ಮಕ್ಕಳ ಶಾಲೆ ನಿಪ್ಪಾಣಿ, ಆಶಾ ಜ್ಯೋತಿ ಬುದ್ಧಿಮಾಂದ್ಯ ಮಕ್ಕಳ ಶಾಲೆ ಯಕ್ಸಂಬಾ, ಶ್ರೀ ಶಾರದಾದೇವಿ ಬುದ್ಧಿಮಾಂದ್ಯ ಮಕ್ಕಳ ಶಾಲೆ ಮದಭಾವಿ ಅಥಣಿ, ಪಿಜಿಕಲಿ ಹ್ಯಾಂಡಿಕ್ಯಾಪ್ಡ್ ಅಸೋಸಿಯೇಶನ್ ಬೆಳಗಾವಿ, ಸಮರ್ಥನಂ ಅಂಗವಿಕಲರ ಸಂಸ್ಥೆ ಬೆಳಗಾವಿ, ಬೆಳಗಾವಿ ಜಿಲ್ಲಾಕಿವುಡ ಸಂಘ, ಸಮನ್ವಯ ಬ್ಲೈಂಡ್ ಫೌಂಡೇಶನ್ ಬೆಳಗಾವಿ, ವಿಕಲಚೇತನ ಸರ್ಕಾರಿ ನೌಕರರ ಸಂಘ ಬೆಳಗಾವಿ ಇಲ್ಲಿನ ವಿಕಲಚೇತನ ಕ್ರೀಡಾಪಟುಗಳು ಸೇರಿದಂತೆ ಸುಮಾರು 900 ವಿಕಲಚೇತನ ಕ್ರೀಡಾಪಟುಗಳು ಜಿಲ್ಲೆಯ ವಿಕಲಚೇತನ ಪುನರ್ವಸತಿ ಕಾರ್ಯಕರ್ತರು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರಿಗೆ ಸೂಚನೆ

ಬೆಳಗಾವಿ: ಈ ಬಾರಿ ಮಳೆಯ ಅಭಾವದಿಂದ ಬೆಳಗಾವಿ ಜಿಲ್ಲೆಯ 15 ತಾಲುಕೂಗಳನ್ನು ಬರ ಪೀಡಿತ ಪ್ರದೇಶಗಳೆಂದು ಸರ್ಕಾರ ಘೋಷಿಸಿರುವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗುವ ಸಾಧ್ಯತೆಗಳು ಇರುವುದರಿಂದ ಹಾಲಿ ಭತ್ತ, ಮೆಕ್ಕೆಜೋಳ ಮತ್ತು ಇತರೆ ಬೆಳೆಗಳ ಕಟಾವು ಮಾಡುವ ಹಂಗಾಮಿನಲ್ಲಿ ಭತ್ತದ ಹುಲ್ಲು ಮೇವನ್ನು ಹಾಳಾಗದಂತೆ ಕ್ರಮ ಅನುಸರಿಸಲು ರೈತರಿಗೆ ಸೂಚಿಸಲಾಗಿದೆ.

ಹೆಚ್ಚಿನ ಪ್ರಮಾಣದಲ್ಲಿ ಮೇವನ್ನು ಒಣಗಿಸಿ ಹುಲ್ಲು ಹಾಳಾಗದಂತೆ ಶೇಖರಣೆ ಮಾಡಬೇಕು ಹಾಗೂ ಅವಶ್ಯಕ ಕಂಡು ಬರುವ ಸಂದರ್ಭಗಳಲ್ಲಿ ರೈತರು ಸರ್ಕಾರಕ್ಕೆ ಮೇವನ್ನು ಮಾರಾಟ ಮಾಡಬಹುದಾಗಿರುತ್ತದೆ.

ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಸುಟ್ಟು ಹಾಕದೇ ಬಣವೆ ಹಾಕಿಕೊಂಡು ದಾಸ್ತಾನಿರಿಸಿಟ್ಟುಕೊಳ್ಳಬೇಕು.

ಬೇಲಿಂಗ್ ಯಂತ್ರಗಳಿಂದ ಭತ್ತದ ಹುಲ್ಲು ಸುರಳಿ ಕಟ್ಟಿ ಹಾಳಾಗದಂತೆ ಶೇಖರಿಸಿಟ್ಟುಕೊಳಬೇಕಾಗಿದೆ. ತಮ್ಮ ಜಾನುವಾರುಗಳಿಗೆ ಮುಂದಿನ ಬೇಸಿಗೆಯಲ್ಲಿ ಸಾಕಾಗುವಷ್ಟು ಹೆಚ್ಚಿನ ಪ್ರಮಾಣದಲ್ಲಿ ಮೇವನ್ನು ದಾಸ್ತಾನಿಟ್ಟುಕೊಳ್ಳಬೇಕು.

ರೈತರು ಮೇವನ್ನು ಹೊರ ರಾಜ್ಯಗಳಿಗೆ ಅಥವಾ ಹೊರ ಜಿಲ್ಲೆಗಳಿಗೆ ಮಾರಾಟ ಅಥವಾ ಸಾಗಾಣಿಕೆಯನ್ನು ಮಾಡದೆ ಇರುವುದರಿಂದ ಜಿಲ್ಲೆಯ ರೈತರಿಗೆ ಅನಕೂಲ ಕಲ್ಪಿಸಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಶಿಸುತ್ತಿರುವ ಜನಪದ ಕಲೆಗಳ ಉಳಿವು ಅಗತ್ಯ



ಕುರಣಿ: ಇಂದಿನ ಕಂಪ್ಯೂಟರ್ ಯುಗದಲ್ಲಿ ನಮ್ಮ ಸಂಸ್ಕೃತಿಯ ಪ್ರತೀಕವಾದ ಜನಪದ ಕಲೆ ಕಣ್ಮರೆಯಾಗುತ್ತಿವೆ. ಕರ್ನಾಟಕ ಜನಪದ ಕಲೆಗಳ ಸುದೀರ್ಘ ಇತಿಹಾಸ ಹೊಂದಿದ್ದು, ಡೊಳ್ಳು ಕುಣಿತ, ಸುಗ್ಗಿಯ ಕುಣಿತ, ವೀರಗಾಸೆ, ಭಜನೆ, ಕಂಸಾಳೆ, ಕೋಲಾಟ, ಗೀಗೀಪದ, ಸೋಬಾನ ಪದ ಮುಂತಾದ ಜನಪದ ಕಲೆಗಳಿಗೆ ಪ್ರೋತ್ಸಾಹ ನೀಡಬೇಕಾದ ಅನಿವಾರ್ಯತೆ ಇದೆ ಎಂದು ಕುರಣಿ ಗಂಗಾದೇವಿ ಮಠದ ಬ್ರಹ್ಮಶ್ರೀ ಆನಂದ ಮಹಾಸ್ವಾಮಿಗಳು ಅಭಿಪ್ರಾಯ ಪಟ್ಟರು.

ಇತ್ತೀಚೆಗೆ ಗಂಗಾದೇವಿ ಮಠದ ಆವರಣದಲ್ಲಿ ಮಹಿಳಾ ಕಲ್ಯಾಣ ಸಂಸ್ಥೆಯ "ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ" ಆಯೋಜಿಸಿದ್ದ ಜನಪದ ಕಲಾ ಉತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇನ್ನೋರ್ವ ಅತಿಥಿ ಶ್ರೀ. ಡಾ.ಬಸವರಾಜ ಚೌಗಲಾ, ಮಾತನಾಡಿ ಕರ್ನಾಟಕ ಜನಪದ ಕಲೆಗಳ ತವರೂರು, ಇತ್ತೀಚಿನ ದಿನಮಾನಗಳಲ್ಲಿ ಗ್ರಾಮೀಣ ಸೊಗಡು ಮಾಯವಾಗಿ ಪಾಶ್ಚಿಮಾತ್ಯ ಸಂಸ್ಕೃತಿಯಲಿ ಸಿಲುಕಿಹಾಕಿಕೊಂಡು ನಮ್ಮತನವನ್ನು ಮರೆಯುತ್ತಿದ್ದೇವೆ ಎಂದರು. ಜನಪದ ಕಲಾ ಉತ್ಸವದ ಅಂಗವಾಗಿ ಭಜನಾ ಹಾಗೂ ಡೊಳ್ಳಿನ ಪದಗಳ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಭಜನಾ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ ಶ್ರೀ ಸದ್ಗುರು ಸಿದ್ಧಾರೂಢ ಭಜನಾ ಮಂಡಳಿ ಶಿರಗಾಂವ, ದ್ವಿತೀಯ ಬಹುಮಾನ ಶ್ರೀ ಸಿದ್ಧಾರೂಢ ಭಜನಾ ಮಂಡಳಿ ಕುರಣಿ, ತೃತೀಯ ಬಹುಮಾನ ಶ್ರೀ ಭಾವೇಶ್ವರಿ ಭಜನಾ ಮಂಡಳಿ ಕುರಣಿ, ಡೊಳ್ಳಿನ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು ಹುಕ್ಕೇರಿಯ ಕಟ್ಟಿ ಸಿದ್ಧೇಶ್ವರ ಗಾಯನ ಸಂಘ, ದ್ವಿತೀಯ ಬಹುಮಾನವನ್ನು ಹುನ್ನೂರಿನ ವಿಠ್ಠಲ ಗಾಯನ ಸಂಘ, ತೃತೀಯ ಬಹುಮಾನವನ್ನು ಲಕ್ಷ್ಮೀದೇವಿ ಗಾಯನ ಸಂಘ, ಕುರಣಿ ಇವರುಗಳು ಪಡೆದುಕೊಂಡರು.

ವಿಜೇತರಿಗೆ ರೂ. 5000/-, ರೂ.3000/- ಹಾಗೂ ರೂ. 2000/- ಗಳ ನಗದು ಬಹುಮಾನ, ಪಾರಿತೋಷಕ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು. ಜಿನರಾಳ ಗ್ರಾಮದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶ್ರೀ. ಡಾ.ಬಸವರಾಜ ಚೌಗಲಾ, ಶ್ರೀ ರಾಮಣ್ಣಾ ಬಂಡಾಯಿ ಪಾಲ್ಗೊಂಡಿದ್ದರು. ಕಿರಣ ಚೌಗಲಾ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುನಾಥ ಚಕ್ರವರ್ತಿ ನಿರೂಪಿಸಿ, ವಂದಿಸಿದರು.

## ಸಿಡಿಲು ಬಡಿದು ಇಬ್ಬರು ಸಹೋದರರು ಸಾವು

ಶಿವಮೊಗ್ಗ: ಜಮೀನಿನಲ್ಲಿ ಕಟಾವು ಮಾಡಿ ಇರಿಸಲಾಗಿದ್ದಂತ ಭತ್ತವನ್ನು ಕಾಯೋದಕ್ಕೆ ತೆರಳಿದ್ದಂತ ಇಬ್ಬರು ಸಹೋದರರಿಗೆ ಸಿಡಿಲು ಬಡಿದು ಸ್ಥಳದಲ್ಲೇ ಸಾವನ್ನಪ್ಪಿರೋ ಘಟನೆ ಶಿವಮೊಗ್ಗದ ಭದ್ರಾವತಿಯಲ್ಲಿ ನಡೆದಿದೆ.

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಹುಣಸೆಕಟ್ಟೆ ಜಂಕ್ಷನ್ ನಲ್ಲಿದ್ದಂತ ಹೊಲದಲ್ಲಿ ಭತ್ತವನ್ನು ಕಟಾವು ಮಾಡಿದ್ದರಿಂದ, ಅದನ್ನ ಕಾಯೋದಕ್ಕೆ ಜಮೀನಿಗೆ ಸಹೋದರರಾದಂತ ಬೀರು(32) ಹಾಗೂ ಸುರೇಶ್(30) ತೆರಳಿದ್ದರು. ರಾತ್ರಿ ಗುಡುಗು ಸಹಿತ ಸುರಿದಂತ ಮಳೆಯ ವೇಳೆಯಲ್ಲಿ ಸಿಡಿಲು ಬಡಿದು ಬೀರು ಹಾಗೂ ಸುರೇಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇದೀಗ ಸಹೋದರರ ಸಾವಿನ ಸುದ್ದಿ ಕೇಳಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

# ಬರಹಗಾರರ ಮನೋಭೂಮಿಕೆ ಹದಗೊಳ್ಳಬೇಕಿದೆ: ಎಲ್.ಎಸ್.ಶಾಸ್ತ್ರಿ.

ಗೋಕಾಕ: ನಮ್ಮಲ್ಲಿ ಒಳ್ಳೆಯ ಸಾಹಿತ್ಯ ಮತ್ತು ಕೆಟ್ಟ ಸಾಹಿತ್ಯವೆಂಬ ಎರಡೇ ಪ್ರಕಾರಗಳಿವೆ. ಬರೆದದ್ದೆಲ್ಲ ಕಾವ್ಯವಾಗುವುದಿಲ್ಲ ಮತ್ತು ಸಾಹಿತ್ಯವಾಗುವುದಿಲ್ಲ. ಕಾವ್ಯದ ಗುಣಲಕ್ಷಣ ತಿಳಿದು ರಚಿಸಿದರೆ ಕಾವ್ಯವಾಗಬಲ್ಲದು ಎಂದು ಬೆಳಗಾವಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಎಲ್.ಎಸ್.ಶಾಸ್ತ್ರಿ ಹೇಳಿದರು.

ಅವರು ರವಿವಾರದಂದು ನಗರದ ಸಿದ್ಧಾರ್ಥ ಲಲಿತಕಲಾ ಮಹಾವಿದ್ಯಾಲಯದ ಆವರಣದಲ್ಲಿ ಜರುಗಿದ ಗೋಕಾಕ ತಾಲೂಕಾ ಚುಟುಕು ಸಾಹಿತ್ಯ ಪರಿಷತ್ತಿನ ನೂತನ ಘಟಕ ಉದ್ಘಾಟನೆ, ಜೇನ್ಗೊಡ ಪುಸ್ತಕ ಲೋಕಾರ್ಪಣೆ, ಚುಟುಕು ಸಾಹಿತ್ಯ ಸಿರಿ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಚುಟುಕು ಕಾವ್ಯಗೋಷ್ಠಿಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸಮಾರಂಭವನ್ನು ಶ್ರೀ ಜಿ.ಬಿ.ತಾಂವಶಿ ಫೌಂಡೇಶನ್ ಅಧ್ಯಕ್ಷ ಮಹಾಂತೇಶ ತಾಂವಶಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿದರು. ಜೇನ್ಗೊಡ ಪುಸ್ತಕವನ್ನು ಹಿರಿಯ ಸಾಹಿತಿ ಪ್ರೊ.



ಚಂದ್ರಶೇಖರ ಅಕ್ಕಿ ಲೋಕಾರ್ಪಣೆಗೊಳಿಸಿ ಮಾತನಾಡಿದರು. ಬಳ್ಳಾರಿಯ ಕೇಂದ್ರ ಕಾರಾಗೃಹ ಸಹಾಯಕ ಅಧೀಕ್ಷಕ ಅಂಬರೀಶ ಪೂಜಾರ ಹಾಗೂ ಕವಯಿತ್ರಿ ವಿದ್ಯಾ ರೆಡ್ಡಿ ಅವರಿಗೆ ಚುಟುಕು ಸಾಹಿತ್ಯ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮುಖ್ಯ ಅತಿಥಿಗಳಾಗಿ ಡಾ. ಸಿ.ಕೆ.ಜೋರಾಪೂರರವರು ಮಾತನಾಡುತ್ತಾ, ಕಾವ್ಯ ಹೊರಹೊಮ್ಮಬೇಕಾದರೆ ನಿರಂತರ ಅಧ್ಯೇಯನಶೀಲರಾಗಬೇಕು. ಸಾಕಷ್ಟು ಕೃತಿಗಳನ್ನು ಓದಬೇಕು. ಯತೇಚ್ಛವಾಗಿ ವಿಷಯ ಸಂಗ್ರಹಣೆ ಇಲ್ಲದೇ ಕಾವ್ಯ ಹೊರ ಹೊಮ್ಮಲಾರದು. ಪ್ರಚಲಿತ ವಿಷಯಗಳ ಮೇಲೆ ಬೆಳಕು ಚೆಲ್ಲುವ ಕಾವ್ಯ ರಚನೆಯಾಗಬೇಕೆಂದು ಹೇಳಿದರು.

ತಾಲೂಕಾಧ್ಯಕ್ಷ ಜಯಾನಂದ ಮಾದರ ಮತ್ತು ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಲಾಯಿತು.

ಉಪಾಧ್ಯಕ್ಷ ಎಮ್.ಎ.ಪಾಟೀಲ ತಾಲೂಕಾ ಗೌರವಾಧ್ಯಕ್ಷ ಡಾ. ಲಕ್ಷ್ಮಣ ಚೌರಿ ಕಾರ್ಯಾಧ್ಯಕ್ಷ ಈಶ್ವರಚಂದ್ರ ಬೆಟಗೇರಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ನಂತರದಲ್ಲಿಯ ಚುಟುಕು ಕಾವ್ಯಗೋಷ್ಠಿಯಲ್ಲಿ ಅರುಣ ಅಕ್ಕಿ, ಸುರೇಶ ಮುದ್ದಾರ, ಸುಭಾಷ ವಾಲಿಕಾರ, ಗೋಪಾಲ ಶೆಟ್ಟಿ, ಏಸ್. ಆರ್.ನಲವಡೆ, ಬಿ.ಬಿ.ಪಟಗುಂದಿ, ಆನಂದ ಮಾಳವದೆ, ಎಮ್.ಬಿ.ಬಳಗಾರ, ರಾಯಪ್ಪಾ ಗುದಗನವರ, ಮಾರುತಿ ದೇಸಾಯಿ, ನಾಗಮ್ಮ ಪೂಜಾರ, ಶಿರೂರ ಶ್ರೀಶೈಲ ಚುಟುಕು ವಾಚನ ಮಾಡಿದರು.

ಉದ್ದಣ್ಣಾ ಗೋಡೇರ ಪ್ರಾರ್ಥಿಸಿದರು, ಆನಂದ ಸೋರಗಾವಿ ಸ್ವಾಗತಿಸಿದರು. ಶೈಲಜಾ ಕೊಕ್ಕರಿ ನೀರೂಪಿಸಿ ವಂದಿಸಿದರು.

# ಬೈಲಹೊಂಗಲ ಎಸಿ ಕಚೇರಿಯಲ್ಲಿ ಎಸ್‌ಡಿಸಿ ಲೋಕಾಯುಕ್ತ ಬಲೆಗೆ

ಬೆಳಗಾವಿ: ಬೈಲಹೊಂಗಲ ಉಪವಿಭಾಗ ಕಚೇರಿಯ ಎಸ್‌ಡಿಸಿ ಮಂಜನಾಥ ಅಂಗಡಿ 60 ಸಾವಿರ ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಪಹಣಿ ಪತ್ರದ ತಿದ್ದುಪಡಿಗೆ ಮಂಜುನಾಥ 60 ಸಾವಿರ ಲಂಚಕ್ಕೆ ಬೇಡಿಕೆಯಿಟ್ಟಿದ್ದರು.

ರಾಮದುರ್ಗ ತಾಲೂಕಿನ ಚಿಕ್ಕೊಪ್ಪ ಎಸ್‌ಕೆ ಗ್ರಾಮದ ರವಿ ಅಜ್ಜಿ, ಪಹಣಿ ಪತ್ರ ತಿದ್ದುಪಡಿ ಅರ್ಜಿ ಸಲ್ಲಿಸಿದ್ದರು.

ಈ ಸಂಬಂಧ ಬೆಳಗಾವಿ ಲೋಕಾಯುಕ್ತ ಠಾಣೆಗೆ ರವಿ ಅಜ್ಜಿ ದೂರು ನೀಡಿದ್ದರು.

ಲೋಕಾಯುಕ್ತ ಎಸ್ಪಿ ಹಣಮತರಾಯ, ಡಿವೈಎಸ್‌ಪಿ ಬಿ.ಎಸ್. ಪಾಟೀಲ, ಪಿಎಸ್‌ಐ ಅನ್ನಪೂರ್ಣ ಹುಲಗೂರ ನೇತೃತ್ವದ ತಂಡದಿಂದ



ಎಸ್‌ಡಿಸಿ ಟ್ರ್ಯಾಪ್ ಮಾಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಬೆಳಗಾವಿ ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ಗೆ 2023ನೇ ಸಾಲಿನ ಕರ್ನಾಟಕ ರಾಜ್ಯ ಪ್ರಶಸ್ತಿ

ಬೆಳಗಾವಿ: ಬೆಳಗಾವಿಯ ಅತ್ಯಂತ ಜನಪ್ರಿಯ ಕ್ರೀಡಾ ಸಂಘ (ಬೆಳಗಾವಿ ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್) ಸ್ಕೇಟಿಂಗ್ ಕ್ಷೇತ್ರದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣಕ್ಕಾಗಿ ತನ್ನ ಸೇವೆಗಾಗಿ 2023-24 ನೇ ಸಾಲಿನ ಕರ್ನಾಟಕ ರಾಜ್ಯ ಪ್ರಶಸ್ತಿಯನ್ನು ಪಡೆಯುತ್ತದೆ. ಕಳೆದ ಒಂದು ದಶಕದಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಸಲ್ಲಿಸಿದ ಅವಿರತ ಮತ್ತು ಸಮರ್ಪಣಾ ಸೇವೆಯು 2023-24 ನೇ ಸಾಲಿನ ಕರ್ನಾಟಕ ರಾಜ್ಯ ಪ್ರಶಸ್ತಿಯನ್ನು ಪಡೆಯಲು ಕಾರಣವಾಗಿದೆ.

ಈ ಕಾರ್ಯಕ್ರಮವು ಜವಾಹರ ಭವನ, ಕಬ್ಬನ್ ಪಾರ್ಕ್, ಬೆಂಗಳೂರಿನ ಜವಾಹರ ಭವನದಲ್ಲಿ ಕರ್ನಾಟಕ ಸರ್ಕಾರ ಶ್ರೀಮತಿ ಲಕ್ಷ್ಮೀ ಹೆಬ್ಬಾಳ್ಕರ್ ಮಹಿಳಾ ಮತ್ತು ಮಕ್ಕಳ ಸಚಿವೆ, ಶ್ರೀಮತಿ ಪುಷ್ಪಲತಾ ರಾಯರ ಜಂಟಿ ನಿರ್ದೇಶಕಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಶ್ರೀಮತಿ ರೂಪಶ್ರೀ ಸಂಶೋಧನೆ. ಅಧಿಕಾರಿ, ಶ್ರೀಮತಿ ಅರ್ಚನಾ ಐಎಎಸ್ ನಿರ್ದೇಶಕರು, ಶ್ರೀ ಪ್ರಕಾಶ್ ಕಾರ್ಯದರ್ಶಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶ್ರೀ ನಿಕಲ್ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಶ್ರೀ ದೇವರಾಜ್ ಸರ್ ಅಧೀಕ್ಷಕ ಕಲ್ಯಾಣ ಇಲಾಖೆ ಬೆಳಗಾವಿ ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಶನ್ ಸ್ಕೇಟಿಂಗ್ ತರಬೇತುದಾರ ಶ್ರೀ ಸೂರ್ಯಕಾಂತ ಹಿಂಡಲಗೇಕರ ಅವರನ್ನು ರಾಜ್ಯ ಪ್ರಶಸ್ತಿ, ಪ್ರಮಾಣಪತ್ರ ಟ್ರೋಫಿ ಮತ್ತು ನಗದು ರೂ. 1 ಲಕ್ಷ, ಶಾಲು ಹೊದಿಸಿ, ಸನ್ಮಾನಿಸಿದರು. ಇತರ ಗಣ್ಯರು ಸಹ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಬೆಳಗಾವಿ ಜಿಲ್ಲಾ ರೋಲರ್ ಸ್ಕೇಟಿಂಗ್ ಸಂಘವನ್ನು 2006 ರಲ್ಲಿ ಸ್ಥಾಪಿಸಲಾಯಿತು. ಹಿರಿಯ ಸ್ಕೇಟಿಂಗ್ ತರಬೇತುದಾರರಾದ



ಶ್ರೀ ಸೂರ್ಯಕಾಂತ ಹಿಂಡಲಗೇಕರ ಅವರ ಸಮರ್ಥ ಮಾರ್ಗದರ್ಶನದಲ್ಲಿ, ಸಂಘವು ಬೆಳಗಾವಿ ಮತ್ತು ಸುತ್ತಮುತ್ತಲಿನ ನಿರ್ಗತಿಕ ಮತ್ತು ಬಡ ಮಕ್ಕಳಿಗೆ ಸ್ಕೇಟಿಂಗ್ ತರಬೇತಿಯನ್ನು ನೀಡುತ್ತಿದೆ.

ಸಾವಿರಾರು ಸ್ಕೇಟರ್‌ಗಳು ಅಸೋಸಿಯೇಷನ್ ಅಂತ ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಸ್ಪರ್ಧೆಗಳಲ್ಲಿ ಹಲವಾರು ಬಹುಮಾನಗಳನ್ನು ಗೆದ್ದಿದ್ದಾರೆ ಎಂದು ನಿಮಗೆ ತಿಳಿಸಲು ನಾವು ಸಂತೋಷಪಡುತ್ತೇವೆ. ಅಸೋಸಿಯೇಷನ್‌ನ ಕೆಲವು ಸ್ಕೇಟರ್‌ಗಳು ಗಿನೆಸ್ ವಿಶ್ವ ದಾಖಲೆ, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಮತ್ತು ಇನ್ನೂ ಹೆಚ್ಚಿನದನ್ನು ಮಾಡಿದ್ದಾರೆ. ಈ ಉದಯೋನ್ಮುಖ ಸ್ಕೇಟರ್‌ಗಳು ರೋಟರಿ ಕಾರ್ಪೊರೇಷನ್ ಸ್ಪೋರ್ಟ್ಸ್ ಅಕಾಡೆಮಿ, ಕೆಎಲ್‌ಇ ಸ್ಕೇಟಿಂಗ್ ರಿಂಕ್, ಗುಡ್ ಶೆಫರ್ಡ್ ಸೆಂಟ್ರಲ್ ಸ್ಕೂಲ್ ಇಂಟರ್‌ನ್ಯಾಶನಲ್ ಸ್ಕೇಟಿಂಗ್ ಟ್ರ್ಯಾಕ್, ನಿಪಾನಿ ಸಂಕೇಶ್ವರ, ಗೋಕಾಕ್ ಮತ್ತು ವಿವಿಧ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿದ್ದಾರೆ.

ಶ್ರೀ. ಸ್ಕೇಟಿಂಗ್ ಕ್ರೀಡೆಗೆ ಸೂರ್ಯಕಾಂತ ಹಿಂಡಲಗೇಕರ ಅವರ ಸಮರ್ಪಣೆಯು ಸಂಘದ ಪ್ರತಿಷ್ಠಿತ ರಾಜ್ಯ ಪ್ರಶಸ್ತಿಯನ್ನು ಪಡೆಯುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಅವರ ಕೊಡುಗೆಗಳು ನಮ್ಮ ಅಕಾಡೆಮಿಗೆ 2015 ರಲ್ಲಿ ರಾಜ್ಯ ಪ್ರಶಸ್ತಿಯನ್ನು ಪಡೆಯಲು ಕಾರಣವಾಯಿತು.

ಬೆಳಗಾವಿ ಜಿಲ್ಲಾ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ BDRSA ಸ್ಕೇಟರ್ಸ್, ಪೋಷಕರು, ಬೆಳಗಾವಿ ಕ್ರೀಡಾ ಪ್ರೇಮಿಗಳು, ಎಲ್ಲಾ ಬೆಳಗಾವಿ ಮತ್ತು ಕರ್ನಾಟಕ ಸರ್ಕಾರ, ಮುದ್ರಣ ಮಾಧ್ಯಮ, ಎಲೆಕ್ಟ್ರಾನಿಕ್ ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮದವರಿಗೆ ಧನ್ಯವಾದಗಳು

# ರಕ್ತದಾನ ಶ್ರೇಷ್ಠದಾನವೆನಿಸಿ ಕೊಂಡಿದೆ: ಕರ್ನಲ್ ಎಸ್. ದರ್ಶನ




ಬೆಳಗಾವಿ: ಎಲ್ಲ ದಾನಗಳಲ್ಲಿ ರಕ್ತದಾನ ಅತ್ಯಂತ ಶ್ರೇಷ್ಠವಾದುದು. ಆ ಮೂಲಕ ಒಬ್ಬ ವ್ಯಕ್ತಿಯನ್ನು ಬದುಕಿಸಲು ಸಾಧ್ಯ. ಸ್ವಯಂ ರಕ್ತದಾನಕ್ಕೆ ಮುಂದೆ ಬಂದು ಅಮೂಲ್ಯ ಜೀವಗಳನ್ನು ಬದುಕಿಸುವುದು ಸಮಾಜದ ಪ್ರತಿಯೊಬ್ಬರ ಕರ್ತವ್ಯವೆಂದು 26 ಕರ್ನಾಟಕ ಎನ್‌ಸಿಸಿ ಬಟಾಲಿಯನ್ ಕಮಾಂಡರ್ ಕರ್ನಲ್ ಎಸ್.ದರ್ಶನ್ ಅವರು ಹೇಳಿದರು.

ಅವರು ಕೆಎಲ್‌ಇ ಸಂಸ್ಥೆಯ ಲಿಂಗರಾಜ ಕಾಲೇಜು, ಆರ್.ಎಲ್.ವಿಜ್ಞಾನ ಕಾಲೇಜುಗಳ ಎನ್‌ಸಿಸಿ ಆರ್ಮಿ, ಏರ್ ವ್ಹಿಂಗ್, ರೆಡ್‌ಕ್ರಾಸ್ ಘಟಕಗಳು, ಕೆಎಲ್‌ಇ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ರಕ್ತ ಭಂಡಾರ ಕೇಂದ್ರಗಳ ಸಹಯೋಗದಲ್ಲಿ 75ನೇ ಅಮೃತ ಮಹೋತ್ಸವ ಎನ್‌ಸಿಸಿ ದಿನಾಚರಣೆ ನಿಮಿತ್ತವಾಗಿ ಜರುಗಿದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ರಕ್ತದಾನವನ್ನು ಮಾಡುವುದು ಪವಿತ್ರ ಕಾರ್ಯಗಳಲ್ಲಿ ಒಂದು. ಒಂದು ಜೀವಿಯನ್ನು ಉಳಿಸಲು ಸಾಧ್ಯ. ವರ್ಷದಲ್ಲಿ ಒಮ್ಮೆಯಾದರೂ ರಕ್ತದಾನವನ್ನು ಮಾಡುವುದರಿಂದ ನಮ್ಮ ದೇಹದ ಆರೋಗ್ಯದಲ್ಲಿ ಪ್ರಗತಿಯಾಗುವುದು. ಎಲ್ಲ ಪೂರ್ವಾ ಗ್ರಹಗಳನ್ನು ತೊರೆದು ರಕ್ತದಾನಕ್ಕೆ ಮುಂದೆ ಬರಬೇಕು. ಎನ್‌ಸಿಸಿ ಕೆಡೆಟ್‌ಗಳು ಇಂತಹ ಜಾಗೃತಿಯನ್ನು ಮೂಡಿಸುವ ಕೆಲಸ ಮಾಡಬೇಕು. ಇದೊಂದು ಸಾಮಾಜಿಕ ಸೇವೆಗಳಲ್ಲಿ ಒಂದಾಗಿದೆ ಎಂದು ಎನ್‌ಸಿಸಿ ಕೆಡೆಟ್‌ಗಳಿಗೆ ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಲಿಂಗರಾಜ ಕಾಲೇಜಿನ ಪ್ರಾಚಾರ್ಯ ಡಾ.ಎಚ್.ಎಸ್. ಮೇಲಿನಮನಿ, ಆರ್‌ಎಲ್‌ಎಸ್ ಕಾಲೇಜಿನ ಪ್ರಾಚಾರ್ಯ ಡಾ.ಜ್ಯೋತಿ ಕವಳೇಕರ, ಎನ್‌ಸಿಸಿ ಅಧಿಕಾರಿಗಳಾದ ಕ್ಯಾಪ್ಟನ್ ಡಾ.ಮಹೇಶ ಗುರನಗೌಡರ, ಡಾ.ಶಿವಾನಂದ ಬುಲಬುಲೆ, ಪ್ರೊಎಚ್.ಎನ್.ಬನ್ನೂರ, ಸುಬೇದಾರ ಕಲ್ಲಪ್ಪಾ ಪಾಟೀಲ ಹವಾಲ್ದಾರ ಧೀರಜ್, ಸಾಹೂ, ಕಾಲೇಜಿನ ರೆಡ್‌ಕ್ರಾಸ್ ಸಂಯೋಜಕ ಪ್ರೊ. ಸುನೀತ ಮೂಡಲಗಿ ಉಪಸ್ಥಿತರಿದ್ದರು. ಕಮಾಂಡರ್ ಕರ್ನಲ್ ದರ್ಶನ ಅವರೊಂದಿಗೆ ಸುಮಾರು 45 ಎನ್‌ಸಿಸಿ ಕೆಡೆಟ್‌ಗಳು ರಕ್ತದಾನ ಮಾಡಿದರು.


## ಹೆಂಡತಿ, ಮಗನನ್ನು ಕೊಲೆ ಮಾಡಿ ಆತ್ಮಹತ್ಯೆ ಮಾಡಿಕೊಂಡ ಶಿಕ್ಷಕ

ತನ್ನ ಪತ್ನಿ ಮತ್ತು ಮಗನ ಕತ್ತು ಕೊಯ್ದು ಕೊಲೆ ಮಾಡಿ ಬಳಿಕ ವ್ಯಕ್ತಿ ಬಳಿಕ ತಾನು ಕೂಡ ಆತ್ಮಹತ್ಯೆ (ಖಣುಭಿಜಜ) ಮಾಡಿಕೊಂಡಿರುವ ಘಟನೆ ಮಹಾರಾಷ್ಟ್ರದಲ್ಲಿ ಸೊಲ್ಲಾಪುರದ ಬಾರ್ಶಿ ಪಟ್ಟಣದ ಉಪ್ಲೈ ರಸ್ತೆಯಲ್ಲಿರುವ ನಾಯ್ಕವಾಡಿ ಪ್ಲಾಟ್‌ನಲ್ಲಿ ನಡೆದಿದೆ.

ಮೃತರು ಅತುಲ್ ಸುಮಂತ್ ಮುಂಡೆ (40), ತೃಪ್ತಿ ಅತುಲ್ ಮುಂಡೆ (35) ಹಾಗು 5 ವರ್ಷದ ಮಗ ಎಂದು ವರದಿಯಾಗಿದೆ.

ಹೆಂಡತಿ, ಮಗನನ್ನು ಕೊಂದ ಪತಿ ಅತುಲ್ ಮುಂಡೆ ಕರ್ಮಲಾ ತಾಲೂಕಿನ ಜಿಲ್ಲಾ ಪರಿಷತ್ ಶಾಲೆಯಲ್ಲಿ ಶಿಕ್ಷಕರಾಗಿದ್ದಾರೆ (ಖಿಜಚಿಛಿಜಡಿ). ಇನ್ನೂ ಪತ್ನಿ ತೃಪ್ತಿ ಮುಂಡೆ ಬಾರ್ಶಿಯ ಅಭಿನವ್ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿದ್ದಾರೆ ಎಂದು ವರದಿಯಿಂದ ತಿಳಿದುಬಂದಿದೆ.

ದಂಪತಿ (ಅಂಣಠಿಟಜ) ಅನ್ಯೋನ್ಯವಾಗಿ ಜೀವನ ನಡೆಸುತ್ತಿದ್ದು, ಮೇಲಿನ ಮಹಡಿಯಲ್ಲಿ ವಾಸಿಸುತ್ತಿದ್ದರು, ಕೆಳಗೆ ಅತುಲ್ ಪೋಷಕರು ವಾಸ ಮಾಡುತ್ತಿದ್ದರು. ಎಂದಿನಂತೆ ಇವರು ಕೆಳಗಿಳಿಯದ ಕಾರಣ ಪೋಷಕರು ಮೇಲಿನ ಮಹಡಿಗೆ ಹೋಗಿ ಬಾಗಿಲು ಒಡೆದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಮಾಹಿತಿ ತಿಳಿದು ಸ್ಥಳಕ್ಕೆ ಬಂದ ಬಾರ್ಶಿ ಪೊಲೀಸರು ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.



# 'ದಾಸಶ್ರೇಷ್ಠ ಭಕ್ತ ಕನಕದಾಸ'

ಹಾವೇರಿ ಜಿಲ್ಲೆಯ ಬ್ಯಾಡ ಊರು
ಉದಯಿಸಿದರು ಕನಕರೆಂಬ ದಾಸ ಶ್ರೇಷ್ಠರು
ದಾಸ-ದಾಸರಲ್ಲೇ ಶ್ರೇಷ್ಠದಾಸರಿವರು
ಸಮಾಜದ ಒಳಿತಿಗೆ ಅವತಾರ ಪುರುಷನಂತೆ ಧರೆಗಿಳಿದರು

ಬೀರಪ್ಪ ನಾಯಕ ಬಚ್ಚಮ್ಮರ
ಉದರದಲಿ ಜನಿಸಿದಿರು
ತಿರುಪತಿ ತಿಮ್ಮಪ್ಪ ದೇವರ
ಆಶೀರ್ವಾದದ ಸ್ವರೂಪ ಇವರು

ಬಂಕಾಪುರದಲಿ ಅಕ್ಷರಾಭ್ಯಾಸ
ಶ್ರೀನಿವಾಸಚಾರ್ಯರ ಪ್ರಿಯ ಶಿಷ್ಯ
ಆಧ್ಯಾತ್ಮಿಕ ಗುರು ಶ್ರೀ ವ್ಯಾಸರಾಯರು
ಸಾಹಿತ್ಯ ,ತರ್ಕ, ಮೀಮಾಂಸೆಯಲಿ ಚತುರರು

ಯುದ್ದದಲಿ ಗಾಯಗೊಂಡು
ಮೂಡಿತು ವೈರಾಗ್ಯ
ದಂಡನಾಯಕನ ವೃತ್ತಿಗೆ ವಿರಾಮ ನೀಡಿಕೊಂಡು
ದಾಸ ಶ್ರೇಷ್ಠ ದೊರೆತದ್ದು ನಮ್ಮ ಸೌಭಾಗ್ಯ

ಕಾಗಿನೆಲೆ ಆದಿಕೇಶವರಾಯರ
ಪರಮ ಭಕ್ತರು ಕನಕದಾಸರು
ಕಾವ್ಯ ಕೀರ್ತನೆಯ ಹರಿಕಾರರು ಉಗಾಭೋಗ,ಮಂಡಿಗೆ
ರಚಿಸಿದರು

ಆರಾಧ್ಯ ದೇವ ಉಡುಪಿಯ ಶ್ರೀಕೃಷ್ಣ
ಪರಮ ಭಕ್ತನಿಗೆ ತೋರಿದ ದಿವ್ಯ ದರುಶನ
ಉಡುಪಿಯ ಮಠದಲ್ಲಿ ಇಂದಿಗೂ ಇದೆ
ಕನಕನ ಕಿಂಡಿ ಎಂದು ಪ್ರಸಿದ್ಧವಾಗಿದೆ

ಜಾತಿಯ ಮದವೇರಿದ ಮನುಜರಿಗೆ ಪಾಠವಾದರು
ಕುಲ-ಕುಲವೆಂದು ಹೊಡೆದಾಡದಿರಿ ಎಂದು ಸಾರಿ ಹೇಳಿದರು
ಕುಲದ ನೆಲೆಯ ಪ್ರಶ್ನಿಸಿದ ಕನಕದಾಸರು
ಜಾತಿ ವ್ಯವಸ್ಥೆಯ ನಿರ್ಮೂಲನೆಯ ಹರಿಕಾರರಾದರು

ಮೋಹನ ತರಂಗಿಣಿ, ನಳ ಚರಿತ್ರೆ
ಹರಿಭಕ್ತಿಸಾರ, ರಾಮಧಾನ್ಯ ಚರಿತೆ
ಹಾಡಿ ಹೊಗಳಿದರು ಮುಗಿಯುವುದಿಲ್ಲ ಕಥೆ
ದಾಸಶ್ರೇಷ್ಠ ಭಕ್ತ ಕನಕದಾಸರ ಮಹಾಕಥೆ



-ಅಮರೇಶ.ಮ.ಗೊರಚಿಕನವರ
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ವಿದ್ಯಾಸಂಗಮ ಬೆಳಗಾವಿ

ಸಂಪುಟ: 4 ಸಂಚಿಕೆ: 252 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089